ಸಂಪುಟ : 9 ಸಂಚಿಕೆ 223 ಪುಟ : 4 ಬೆಲೆ: 3.00 ಶುಕ್ರವಾರ ಅಕ್ಟೋಬರ್ 11 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 223 Pages : 4 Price : 3.00 Friday October 11 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 11 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22. ಅಮರೇಶ್ವರ ನಗರ, ತಾಜನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34 – ಹುಡ್ಕೋ ಕೆಲವು ಭಾಗಗಳು. ವಾರ್ಡ್ ನಂ. 33 – ವೀರೇಶ್ವರ ನಗರ, ಗಡ್ಡಿಯವರ ಲೈನ್, ಬಸಪ್ಪರವರ ಲೈನ್, ಪಂಚಮುಖಿ ದೇವರ ಗುಡಿ ಲೈನ್, ಬೆಲ್ಲದ ಬಾಕಳೆ, ಅಬ್ಬಿಗೇರಿ, ಕಲಾಲ, ಹೊಂಡೇವಾಡಿ, ಮಂಗಳೂರು ಸರ್, ಕೇಶವ ನಗರ ಭಾಗ-1,2 ಬ್ಯಾಂಕರ್ಸ್ ಕಾಲೋನಿ, ಕರಿಗೌಡ್ರ ಲೈನ್, ಜಾಕೀರ್ ಹುಸೇನ್ ಕಾಲೋನಿ. ವಾರ್ಡ್ ನಂ 6, 7 – ಪೆಂಡಾರ ಓಣಿ, ಮಲ್ಲೇಶಪ್ಪನ ಲೈನ್, ನಂದರಗಿ ಲೈನ್, ಅಬ್ಬಿಗೇರಿ ಲೈನ್, ರೊಟ್ಟಿಯವರ ಲೈನ್, ಮಂಜುರವರ ಲೈನ್, ನಾವಳ್ಳಿ ಲೈನ್, ರೆಡ್ಡಿಯವರ ಲೈನ್, ಗಚ್ಚಿಯವರ ಲೈನ್, ಪಿಂಡಕೋರವರ ಲೈನ್, ಕನ್ಯಾಳ ಅಗಸಿ, ಹುಚ್ಚನಗೌಡರ ಓಣಿ, ಚೆನ್ನೇಗೌಡರ ಓಣಿ, ಸಿದ್ದಲಿಂಗ ನಗರ, ಪಿ ಪಿ ಗುಡಿ, ಬಚ್ಚ ಲಕ್ಕಮ್ಮನ ಗುಡಿ ಲೈನ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗ ಜಿಲ್ಲಾ ಕಂದಾಯ ನೌಕರರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕಂದಾಯ ನೌಕರರ ಸಂಘದ ನೂತನ ಪದಾಧಿಕಾರಿಗಳನ್ನು ಜಿಲ್ಲಾ ಸರ್ಕಾರಿ ನೌಕರರ ಭವನದಲ್ಲಿ ಜರುಗಿದ ಸಭೆಯಲ್ಲಿ ಒಮ್ಮತದಿಂದ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ದೇವಾನಂದ ಟಿ.ವಾಲ್ಮೀಕಿ, ಗೌರವಾಧ್ಯಕ್ಷರಾಗಿ ಎಸ್.ಎಂ. ಹಿರೇಮಠ, ಸಲಹಾ ಅಧ್ಯಕ್ಷರಾಗಿ ಎನ್.ಬಿ. ದೊಡ್ಡಮನಿ, ಉಪಾಧ್ಯಕ್ಷರಾಗಿ ಬಿ.ಎಸ್. ಕನ್ನೂರ, ಎಂ.ಎ. ನದಾಫ್, ಪ್ರಧಾನ ಕಾರ್ಯದರ್ಶಿಗಳಾಗಿ ಎಫ್.ಎನ್. ಗೌಡರ, ಜಂಟಿ ಕಾರ್ಯದರ್ಶಿಗಳಾಗಿ ಮಹೇಶಗೌಡ ಪೊಲೀಸ್‌ಪಾಟೀಲ, ಖಜಾಂಚಿಗಳಾಗಿ ಕಿರಣ ಓಲೇಕಾರ, ರಾಜ್ಯ ಪರಿಷತ್ ಸದಸ್ಯರಾಗಿ ಸಂಗಮೇಶ ಕಡಗದ, ಬಿ.ವಿ. ಕಾಸರ, ಸಂಘಟನಾ ಕಾರ್ಯದರ್ಶಿಗಳಾಗಿ ಶಿವಕುಮಾರ ಹೊಸಕೋಟಿ, ಮಹಿಳಾ ಸಂಘಟನಾ ಕಾರ್ಯದರ್ಶಿಗಳಾಗಿ ಜಿ.ಬಿ. ಆನಂದಪ್ಪನವರ, ಸಲಹಾ ಸಮಿತಿ ಸದಸ್ಯರುಗಳಾಗಿ ಪಿ.ಬಿ. ಕೇಮಾಯಿ, ಸಂತೋಷ ಅಸ್ಕಿ, ಜಿ.ಟಿ. ಕೊಪ್ಪದ, ಎಸ್.ಎಲ್. ಪಾಟೀಲ, ಸಿ.ಎಸ್. ಮಠದ, ಗಣೇಶ ಕೊಡಕೇರಿ, ಎಂ.ಎಸ್. ವಿಭೂತಿ, ಆಂತರಿಕ ಲೆಕ್ಕ ಪರಿಶೋಧಕರಾಗಿ ಆರ್.ವೈ. ವಿಕ್ರಂ ಅವರನ್ನು ಆಯ್ಕೆ ಮಾಡಲಾಯಿತು.

### ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 8ನೇ ದಿನದ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು


# ಪರಿಶ್ರಮ, ಸಾಧನೆಯಿಲ್ಲದೇ ಶ್ರೇಯಸ್ಸು ಸಿದ್ಧಿಸದು

■ ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ (ಮಾನವ ಧರ್ಮ ಮಂಟಪ)

ಸಂಪತ್ತು ಬೆಳೆದಂತೆಲ್ಲ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದು. ಸಂತೃಪ್ತಿ, ಸಮೃದ್ಧಿಗಾಗಿ ಧರ್ಮಾಚರಣೆ ಬೇಕು. ಬೆಟ್ಟಕ್ಕೆ ಬೆಟ್ಟದ ಅವಶ್ಯಕತೆ ಇಲ್ಲದಿರಬಹುದು. ಆದರೆ ಮನುಷ್ಯನಿಗೆ ಮನುಷ್ಯನ ಅವಶ್ಯಕತೆಯಿದೆ. ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಸದಾ ಶಾಂತಿ ನೆಲೆಸಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 8ನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಕಲಿಕೆ, ಗಳಿಕೆ ಮತ್ತು ಭಗವಂತನ ಚಿಂತನೆಯಲ್ಲಿ ಹೆಜ್ಜೆ ಹಾಕಬೇಕು. ಪ್ರತಿಯೊಬ್ಬರೂ ಸಮಯ ಪಾಲನೆ, ನಿಯಮ ಪಾಲನೆ ಮತ್ತು ಸಂಯಮ ಪಾಲನೆ ಬೆಳೆದು ಬರಬೇಕು. ಧರ್ಮ ಸೂಜಿಯಾಗಿ ಸಂಬಂಧಗಳನ್ನು ಬೆಸೆಯುತ್ತದೆ. ಜಾತಿ ಕತ್ತರಿಯಾಗಿ ಸಂಬಂಧಗಳನ್ನು ದೂರ ಮಾಡುತ್ತದೆ. ಜಾತಿಗಿಂತ ಧರ್ಮ ಬಹಳ ದೊಡ್ಡದು. ಹಣ ಮತ್ತು ಅಧಿಕಾರದ ಬಗ್ಗೆ ಸದಾ ಚಿಂತಿಸುವ ಮನುಷ್ಯ ತನ್ನ ದೇಶ,




ಸಂಸ್ಕೃತಿ ಮತ್ತು ಧರ್ಮದ ಬಗ್ಗೆ ಚಿಂತಿಸಲಾರ. ವಿವೇಕ, ಧೈರ್ಯ, ಸ್ನೇಹ ಇವು ನಮ್ಮ ವ್ಯಾಧಿಗಳಿಗೆ ದಿವ್ಯೌಷಧವಾಗಿದೆ ಎಂದರು.

'ಹಾಸ್ಯದಲ್ಲಿ ನೈತಿಕ ಮೌಲ್ಯಗಳು' ಎಂಬ ವಿಷಯ ಕುರಿತು ಗಂಗಾವತಿ ಪ್ರಾಣೇಶ್ ಸುದೀರ್ಘವಾಗಿ ಮಾತನಾಡಿ, ಸಮಸ್ಯೆ-ಸವಾಲುಗಳು ಎಲ್ಲರ ಜೀವನದಲ್ಲಿ ಬರುತ್ತವೆ. ಅವುಗಳಿಗೆ ಅಂಜದೇ ಅಳುಕದೇ ನಗು ನಗುತ್ತಾ ಬದುಕುವ ಆತ್ಮಸ್ಥೈರ್ಯ ಗಳಿಸಿಕೊಳ್ಳಬೇಕಾಗುತ್ತದೆ. ಹಾಸ್ಯದ ಮೂಲಕ ನೈತಿಕ ಮೌಲ್ಯಗಳನ್ನು ಸಂಪಾದಿಸಿಕೊಂಡು ಉತ್ಕೃಷ್ಟ ಮಾನವ ಜೀವನವನ್ನು

> ಸಜ್ಜನರಿಗೆ ಬರುವ ಆಪತ್ತು, ದುರ್ಜನರಿಗೆ ಬರುವ ಸಂಪತ್ತು ಬಹಳ ಕಾಲ ಉಳಿಯುವುದಿಲ್ಲ. ಸಜ್ಜನರಿಗೆ ಆಪತ್ತು ಬರುವುದು ಕೀರ್ತಿಗಾಗಿ, ದುರ್ಜನರಿಗೆ ಸಂಪತ್ತು ಬರುವುದು ವಿನಾಶಕ್ಕಾಗಿ ಎಂಬುದನ್ನು ಮರೆಯಬಾರದು. ಪರಿಶ್ರಮ, ಸಾಧನೆಯಿಲ್ಲದೇ ಶ್ರೇಯಸ್ಸು ಸಿದ್ಧಿಸದು. ಹಣವಂತನಾಗದಿದ್ದರೂ ಚಿಂತೆಯಿಲ್ಲ. ಗುಣವಂತನಾಗಿ ಬಾಳಬೇಕು. ನವರಾತ್ರಿಯ 8ನೇ ದಿನ ಮಹಾಗೌರಿ ಹೆಸರಿನಿಂದ ದೇವಿಯನ್ನು ಪೂಜಿಸುತ್ತಾರೆ. ಈ ದೇವಿ ಆರಾಧನೆಯಿಂದ ಹಾನಿಕಾರಕ ಪ್ರಸಂಗಗಳನ್ನು ನಿರ್ಮೂಲನೆ ಮಾಡಿ ಸದ್ಗುಣ ಮತ್ತು ಆತ್ಮ ಸಾಕ್ಷಾತ್ಕಾರದ ಹಾದಿಯಲ್ಲಿ ಮುನ್ನಡೆಸುವ ಶಕ್ತಿಯನ್ನು ಕರುಣಿಸುತ್ತಾರೆ.
>
> – ಶ್ರೀ ಡಾ. ವೀರಸೋಮೇಶ್ವರ ಜಗದ್ಗುರುಗಳು.
> ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

**ಪ್ರಶಸ್ತಿ ಪ್ರದಾನ**

ನರೇಗಲ್ಲ-ಸವದತ್ತಿ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳಿಗೆ 'ಸಾಧನ ಸಿರಿ' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿ ಶುಭ ಹಾರೈಸಿದರು. ಸಿದ್ಧರಬೆಟ್ಟ-ಅಬ್ಬಿಗೇರಿ ವೀರಭದ್ರ ಶಿವಾಚಾರ್ಯರು ಪ್ರಶಸ್ತಿ ವಾಚನ ಮಾಡಿದರು. ಪ್ರಶಸ್ತಿ ಪುರಸ್ಕೃತರಾದ ನರೇಗಲ್ಲ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನದಲ್ಲಿ ಸಾಧನೆ ಮಾತನಾಡಬೇಕೇ ಹೊರತು ಮಾತನಾಡುವುದೇ ಸಾಧನೆ ಆಗಬಾರದು. ಆಲಸ್ಯ ಮತ್ತು ದುರ್ವ್ಯಸನಗಳಿಂದ ಮನುಷ್ಯ ಮುಕ್ತನಾಗಿ ಆದರ್ಶ ಸಂಸ್ಕೃತಿ ಮೈಗೂಡಿಸಿಕೊಂಡಾಗ ಜೀವನ ಸಾರ್ಥಕಗೊಳ್ಳುತ್ತದೆ ಎಂದರು.

ಸಾರ್ಥಕಪಡಿಸಿಕೊಳ್ಳಬೇಕಾಗಿದೆ ಎಂದರು.

ಚಳಗೇರಿ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು. ಕೊತಬಾಳ ಅಂಕಲಿ ಅಡವಿಸಿದ್ಧೇಶ್ವರಮಠದ ಗಂಗಾಧರ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಅಕ್ಕಿಆಲೂರು ಮುತ್ತಿನಕಂತಿಮಠದ ಚಂದ್ರಶೇಖರ ಶಿವಾಚಾರ್ಯರು ಪ್ರಾಸ್ತಾವಿಕ ಮಾತನಾಡಿದರು.

►► 3ನೇ ಪುಟಕ್ಕೆ

### ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ ಅಭಿಯಾನದಲ್ಲಿ ಚಂದ್ರಶೇಖರ ಕಂದಕೂರ

# ಬೇಡಿಕೆ ಆಧಾರಿತ ಕ್ರಿಯಾ ಯೋಜನೆ ಸಿದ್ಧಪಡಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ಇಲಾಖೆ ಸಿದ್ಧಪಡಿಸಿದ ವೇಳಾಪಟ್ಟಿಯಂತೆ ಬೇಡಿಕೆ ಆಧಾರಿತ ಕ್ರಿಯಾಯೋಜನೆಯನ್ನು ಸಿದ್ದಪಡಿಸಿ ಇಲಾಖೆಗೆ ಸಲ್ಲಿಸಬೇಕು ಎಂದು ತಾ.ಪಂ ಸಹಾಯಕ ನಿರ್ದೇಶಕ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ತಾಲೂಕಿನ ಸವಡಿ ಗ್ರಾ.ಪಂನಲ್ಲಿ ಹಮ್ಮಿಕೊಂಡಿದ್ದ 'ಉದ್ಯೋಗ ಖಾತರಿ ನಡಿಗೆ ಸಬಲತೆಯೆಡಗೆ' ಅಭಿಯಾನ ಕಾಮಗಾರಿ ಬೇಡಿಕೆ ಪಡೆದುಕೊಳ್ಳುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ತಾಲೂಕಿನ ಎಲ್ಲಾ ಗ್ರಾ.ಪಂ ವ್ಯಾಪ್ತಿಯಲ್ಲಿ ಪ್ರತಿಯೊಂದು ಮನೆ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಿ ಬೇಡಿಕೆ ಸ್ವೀಕರಿಸಬೇಕು. ಗಂಡು-ಹೆಣ್ಣಿಗೆ ಸಮಾನ ಕೂಲಿ, ಯೋಜನೆಯಡಿ ದೊರೆಯುವ ವಯಕ್ತಿಕ ಸೌಲಭ್ಯ ಅರ್ಹತೆಗಳು, ಗ್ರಾಮೀಣ ಪ್ರದೇಶದಲ್ಲಿ



ಕುಟುಂಬಕ್ಕೆ 100 ದಿವಸ ಕೆಲಸ ಖಾತರಿ ಸೇರಿದಂತೆ ನರೇಗಾ ಯೋಜನೆ ಸಂಪೂರ್ಣ ಮಾಹಿತಿ ನೀಡಬೇಕು ಎಂದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮದ ಮನೆ ಮನೆಗೆ ನರೇಗಾ ಯೋಜನೆಯ ಕುರಿತು ಕರಪತ್ರ ನೀಡಿ ಬೇಡಿಕೆ ಸ್ವೀಕರಿಸಲಾಗುತ್ತಿದ್ದು, ಯಾವುದೇ ಮಾಹಿತಿ ಮತ್ತು ಕುಂದು ಕೊರತೆಗಾಗಿ 8277506000 ಏಕೀಕೃತ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ಮಾಹಿತಿ ಪಡೆದುಕೊಳ್ಳಲು ಸಲಹೆ ನೀಡಿದರು.

> ಕ್ರಿಯಾ ಯೋಜನೆ ಪಟ್ಟಿಯಂತೆ ಪ್ರತಿ ಗ್ರಾ.ಪಂನಲ್ಲಿ ಕೆಲಸ ನೀಡುವ ನರೇಗಾ ಸಿಬ್ಬಂದಿಗಳು ಮನೆ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಬೇಕು. 30ರವರೆಗೆ ಗ್ರಾ.ಪಂ ಮಟ್ಟದ ವಾರ್ಷಿಕ ಕ್ರಿಯಾ ಯೋಜನೆಯ ಅನುಮೋದನೆಗಾಗಿ ವಿಶೇಷ ಗ್ರಾಮ ಸಭೆ ಮಾಡಬೇಕು, 5ರ ಒಳಗೆ ಗ್ರಾ.ಪಂ ವಾರ್ಷಿಕ ಕ್ರಿಯಾ ಯೋಜನೆಯನ್ನು ತಾಲೂಕು ಪಂಚಾಯಿತಿಗೆ ಸಲ್ಲಿಸಬೇಕು ಎಂದು ಚಂದ್ರಶೇಖರ ಬಿ.ಕಂದಕೂರ ತಿಳಿಸಿದರು.

ಈ ಸಂದರ್ಭದಲ್ಲಿ ಪಂಚಾಯತ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು, ತಾಂತ್ರಿಕ ಸಹಾಯಕರು, ಇಂಜಿನಿಯರ್, ಬಿಎಫ್‌ಟಿ ಹಾಗೂ ಗ್ರಾಮಸ್ಥರು ಹಾಜರಿದ್ದರು.

## ಸರ್ವರ ಅಭಿವೃದ್ಧಿ ಗುರುಪೀಠದ ಧ್ಯೇಯ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವೀರಶೈವ ಧರ್ಮದಲ್ಲಿ ಪಂಚಪೀಠಗಳು ಪ್ರಾಚೀನ ಗುರುಪೀಠಗಳಾಗಿದ್ದು, ಶಿವಾದ್ವೈತ ಸಿದ್ಧಾಂತದ ಕೇಂದ್ರಗಳಾಗಿವೆ. ಧರ್ಮದ ಮೂಲ ಗಂಗೋತ್ರಿಯಂತೆ ಇವೆ. ಜಾತಿ-ಪಂಥಗಳ ಗಡಿಯನ್ನು ಮೀರಿ ರಾಷ್ಟ್ರೀಯ ಭಾವೈಕ್ಯತೆ ಮತ್ತು ಸಾಮರಸ್ಯ ಹುಟ್ಟು ಹಾಕುವ ರಾಷ್ಟ್ರೀಯ ಗುರುಪೀಠಗಳು ಎಂಬ ಪ್ರಖ್ಯಾತಿ ಪಂಚಪೀಠಗಳಿಗೆ ಸಲ್ಲುತ್ತದೆ ಎಂದು ಬಾಳೆಹೊನ್ನೂರಿನ ಶ್ರೀಮದ್ ರಂಭಾಪುರಿ ಜಗದ್ಗುರು ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ನುಡಿದರು.

ಶರನ್ನವರಾತ್ರಿ ಅಂಗವಾಗಿ ಅಬ್ಬಿಗೇರಿಯ ಹೊಸ ಹಿರೇಮಠದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರು ವಿಶ್ವ ಶಾಂತಿ ಹಾಗೂ ಲೋಕ ಕಲ್ಯಾಣಾರ್ಥವಾಗಿ 8ನೇ ದಿನದ ಇಷ್ಟಲಿಂಗ ಮಹಾಪೂಜಾ ನಂತರ ಆಶೀರ್ವಚನ ನೀಡಿದರು.

ಪೃಥ್ವಿ, ಅಪ್, ತೇಜ, ವಾಯು ಮತ್ತು ಆಕಾಶವನ್ನು ಪ್ರತಿನಿಧಿಸುವ ಪಂಚಪೀಠಗಳು ವೀರ, ಸದ್ಧರ್ಮ, ವೈರಾಗ್ಯ, ಸೂರ್ಯ, ಜ್ಞಾನ ಪ್ರವೃತ್ತಿಗಳನ್ನು ಜನಮನದಲ್ಲಿ ಬೆಳೆಸುವ ಕಾರ್ಯ ಮಾಡಿವೆ. ಶ್ರೀ ರಂಭಾಪುರೀ, ಶ್ರೀ ಉಜ್ಜಯನಿ, ಶ್ರೀ ಕೇದಾರ, ಶ್ರೀ ಶ್ರೀಶೈಲ ಹಾಗೂ ಶ್ರೀ ಕಾಶೀ ಧರ್ಮ ಪೀಠಗಳು ಮೂಲಸ್ಥಾನಗಳಾಗಿವೆ. ಈ ಗುರು ಪೀಠಗಳು ಸಂಪತ್ತು-ಶಾಂತಿ, ತ್ಯಾಗ, ವೈರಾಗ್ಯ, ನಿರ್ಮಲತೆ ಮತ್ತು ಜ್ಞಾನವನ್ನು ಪ್ರತಿನಿಧಿಸುತ್ತಿದ್ದು, ಸರ್ವ ಜನಾಂಗದ ಶ್ರೇಯೋಭಿವೃದ್ಧಿ ಕಾರ್ಯವೇ ಈ ಗುರು ಪೀಠಗಳ ಪರಮ ಧ್ಯೇಯವಾಗಿದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ನುಡಿದರು.


## ಕಿತ್ತೂರು ವೀರಜ್ಯೋತಿಯ ಆಗಮನ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ವರ್ಷ ಅಕ್ಟೋಬರ್ 23ರಿಂದ 25ರವರೆಗೆ ಬೆಳಗಾವಿ ಜಿಲ್ಲೆಯ ಕಿತ್ತೂರು ಕೋಟೆ ಆವರಣದಲ್ಲಿ ವೀರ ರಾಣಿ ಚನ್ನಮ್ಮರ ಸ್ಮರಣೆಯಲ್ಲಿ ಕಿತ್ತೂರು ಉತ್ಸವ ಆಚರಿಸಲಾಗುತ್ತದೆ. ರಾಜ್ಯಾದ್ಯಂತ ಕಿತ್ತೂರು ಉತ್ಸವದ ಅಂಗವಾಗಿ ವೀರ ಜ್ಯೋತಿಯ ಮೆರವಣಿಗೆ ಸಂಚರಿಸುತ್ತಿದ್ದು, ಅಕ್ಟೋಬರ್ 12ರಂದು ಗದಗ ಜಿಲ್ಲೆಗೆ ವೀರ ಜ್ಯೋತಿ ಆಗಮಿಸಲಿದೆ.

ಅಕ್ಟೋಬರ್ 12ರಂದು ಬೆಳಿಗ್ಗೆ 10 ಗಂಟೆಗೆ ಗದಗ ನಗರದ ಚನ್ನಮ್ಮ ಸರ್ಕಲ್‌ನಲ್ಲಿ ಕಿತ್ತೂರು ಉತ್ಸವದ ಅಂಗವಾಗಿ ಆಗಮಿಸುವ ವೀರ ಜ್ಯೋತಿಗೆ ಜಿಲ್ಲಾಡಳಿತದಿಂದ ಸ್ವಾಗತಿಸಲಾಗುತ್ತಿದ್ದು, ನಂತರ ಲಕ್ಕುಂಡಿ, ಬನ್ನಿಕೊಪ್ಪ ಮಾರ್ಗವಾಗಿ ಕೊಪ್ಪಳ ಜಿಲ್ಲೆಗೆ ತೆರಳುವುದು.

ವೀರಜ್ಯೋತಿ ಸ್ವಾಗತಿಸುವ ಕಾರ್ಯಕ್ರಮಕ್ಕೆ ಕಿತ್ತೂರು ಚನ್ನಮ್ಮ ಅಭಿಮಾನಿಗಳು, ಕನ್ನಡಪರ ಸಂಘಟನೆಗಳು, ಸಾರ್ವಜನಿಕರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಆಗಮಿಸುವ ಮೂಲಕ ಯಶಸ್ವಿಗೊಳಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಕೋರಿದ್ದಾರೆ.




### ಉದ್ಯಮಿ ರತನ್ ಟಾಟಾ ಅಗಲಿಕೆಗೆ ಸಂಸದ ಬಸವರಾಜ ಬೊಮ್ಮಾಯಿ ಸಂತಾಪ


## ಟಾಟಾ ಅಪ್ಪಟ ದೇಶಾಭಿಮಾನಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಖ್ಯಾತ ಉದ್ಯಮಿ ರತನ್ ಟಾಟಾ ಅವರು ಲಾಭ-ನಷ್ಟ ಲೆಕ್ಕಿಸದೇ ದೇಶಾಭಿಮಾನದಿಂದ ಉದ್ಯಮ ನಡೆಸಿದ್ದರು ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ.

ರತನ್ ಟಾಟಾ ಅವರ ಅಗಲಿಕೆಗೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ಅವರು, ರತನ್ ಟಾಟಾ ಉದ್ಯಮವನ್ನು ಕೇವಲ ಲಾಭಕ್ಕಾಗಿ ಮಾಡಲಿಲ್ಲ, ಅವರು ಮಾಡುವ ವ್ಯವಹಾರದಲ್ಲಿ ದೇಶದ ಮೇಲಿನ ಅಭಿಮಾನ ಹೆಚ್ಚಿರುತ್ತಿತ್ತು. ಹೀಗಾಗಿ ದೇಶವೇ ಹೆಮ್ಮೆ ಪಡುವಂತಹ ಉದ್ಯಮಿಯಾಗಿ ಬೆಳೆದರು.

ಆರಂಭದ ದಿನಗಳಲ್ಲಿ ಟಾಟಾ ಸಂಸ್ಥೆಯಲ್ಲಿ ಕೆಲಸಗಾರರಾಗಿ ನಂತರ ಸುಮಾರು ಎರಡು ದಶಕಗಳ ಕಾಲ ಟಾಟಾ ಸಂಸ್ಥೆಯನ್ನು ವಿಶ್ವ ಮಟ್ಟಕ್ಕೆ ಬೇಳೆಸಿರುವುದು ಅವರ ದೂರದೃಷ್ಟಿಗೆ ಸಾಕ್ಷಿಯಾಗಿದೆ. ಟಾಟಾ ಅವರು ವಿದೇಶಿ ಕಾರು ಕಂಪನಿಗಳನ್ನು ಖರೀದಿಸುವ ಮೂಲಕ ಭಾರತ ಹೆಮ್ಮೆ ಪಡುವಂತೆ ಮಾಡಿದ್ದರು. ಅವರು



ಧಾರವಾಡಕ್ಕೆ ಬಂದಾಗ ನಮ್ಮ ತಂದೆ ದಿವಂಗತ ಎಸ್.ಆರ್. ಬೊಮ್ಮಾಯಿ ಅವರೊಂದಿಗೆ ಚರ್ಚೆ ನಡೆಸಿದ ಪರಿಣಾಮ ಧಾರವಾಡದಲ್ಲಿ ಟಾಟಾ ಮೋಟರ್ಸ್ ಕಾರ್ಖಾನೆ ಸ್ಥಾಪನೆ ಮಾಡಿದರು ಎಂದು ಬೊಮ್ಮಾಯಿ ನೆನಪಿಸಿಕೊಂಡಿದ್ದಾರೆ.

ರತನ್ ಟಾಟಾ ಅವರ ಅಗಲಿಕೆ ಕೇವಲ ಉದ್ಯಮ ಕ್ಷೇತ್ರಕಷ್ಟೇ ಅಲ್ಲದೆ ಇಡೀ ದೇಶಕ್ಕೆ ನಷ್ಟವಾಗಿದೆ. ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ, ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಹಾಗೂ ಅಭಿಮಾನಿಗಳಿಗೆ ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

# ಜಿಮ್ಸ್ ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 1ನೇ ವರ್ಷದ ವಿದ್ಯಾರ್ಥಿಗಳು ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಮೊದಲನೇ ವರ್ಷದ ಎಂ.ಬಿ.ಬಿ.ಎಸ್ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದಿದ್ದಾರೆ.

21 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 90 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ರಾಜ್ಯದಲ್ಲಿ ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾಲಯಕ್ಕೆ ಅತೀ ಹೆಚ್ಚು (98.6%) ಉತ್ತೀರ್ಣತೆಯಲ್ಲಿ ತೇರ್ಗಡೆಯಾಗಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವಿದ್ಯಾರ್ಥಿಗಳು ದಾಖಲೆ ನಿರ್ಮಿಸಿದ್ದಾರೆ. ಸದರಿ ವಿದ್ಯಾರ್ಥಿಗಳ ಸಾಧನೆಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಕೆ. ಪಾಟೀಲ, ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಹಾಗೂ ನಿರ್ದೇಶಕರು, ಪ್ರಾಂಶುಪಾಲರು, ವೈದ್ಯಕೀಯ ಅಧೀಕ್ಷಕರು, ಜಿಲ್ಲಾ ಶಸ್ತ್ರಚಿಕಿತ್ಸಕರು ಮತ್ತು ಬೋಧಕ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಕ್ಯೂಆರ್ ಕೋಡ್ ಮೂಲಕ ಬೇಡಿಕೆ ಸಲ್ಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಭಾಗದ ಜನರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತಮ್ಮ ಬೇಡಿಕೆಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಉದ್ಯೋಗ ಚೀಟಿದಾರ ರೈತರು ತಮಗೆ ಅವಶ್ಯಕತೆ ಇರುವ ವೈಯಕ್ತಿಕ ಅಥವಾ ಸಮುದಾಯ ಕಾಮಗರಿಗಳ ಬೇಡಿಕೆಗಳನ್ನು ಪಂಚಾಯಿತಿಗೆ ಹೋಗಿ ಅರ್ಜಿ ಸಲ್ಲಿಸಲು ಪರದಾಡುವ ಅವಶ್ಯಕತೆ ಇಲ್ಲ. ಅಕ್ಟೋಬರ್ ಮಾಹೆಯಿಂದ ನವೆಂಬರ್-5ರವರೆಗೆ ನಿಮ್ಮ ಬೆರಳ ತುದಿಯಲ್ಲಿ ಬೇಡಿಕೆ ಸಲ್ಲಿಸಲು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಅರ್ಜಿ ಸಲ್ಲಿಸುವ ಸರಳ ವಿಧಾನವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಆಯುಕ್ತಾಲಯವು ಜಾರಿಗೆ ತಂದಿದೆ.

ಜಿಲ್ಲಾ ವ್ಯಾಪ್ತಿಯಲ್ಲಿ ಎಲ್ಲಾ ಗ್ರಾ.ಪಂಗಳಲ್ಲಿ ವೈಯಕ್ತಿಕ ಕಾಮಗಾರಿ ಬೇಡಿಕೆ ಪಟ್ಟಿ ಇಡುವ ಮೂಲಕ ಬೇಡಿಕೆ ಸಂಗ್ರಹಿಸಲಾಗುತ್ತಿದ್ದು, 2025-26ನೇ ಸಾಲಿನ ವಾರ್ಷಿಕ ಕ್ರಿಯಾಯೋಜನೆ ತಯಾರಿಕೆಯಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಹೆಚ್ಚಿಸುವ ಹಾಗೂ ಸಾರ್ವಜನಿಕರ ಜವಾಬ್ದಾರಿಯ ಅರಿವು ಮೂಡಿಸುವ ಕ್ರಿಯಾತ್ಮಕ ಮಾಹಿತಿ, ಶಿಕ್ಷಣ ಹಾಗೂ ಸಂವಹನ ಚಟುವಟಿಕೆಗಳು ಗ್ರಾಮ ಪಂಚಾಯಿತಿ ಹಂತದಲ್ಲಿ ಆಯೊಜಿಸುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

# ಗ್ರಾಮ ಘಟಕದ ಅಧ್ಯಕ್ಷರಾಗಿ ಮಹೇಶ ಬಾಲರಡ್ಡಿ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಚಿಂಚಲಿ ಗ್ರಾಮದ ಜನಪರ ಸೇವಾಸಕ್ತರಾದ ಮಹೇಶ ಬಸಪ್ಪ ಬಾಲರಡ್ಡಿ ಅವರನ್ನು ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನದ ಚಿಂಚಲಿ ಗ್ರಾಮ ಘಟಕದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ ಎಂದು ಪ್ರತಿಷ್ಠಾನದ ಸಂಚಾಲಕ ಕುಮಾರಗೌಡ ಪಾಟೀಲ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ತಡರಾತ್ರಿ ಅಬ್ಬರಿಸಿದ ಮಳೆರಾಯ ಕೌಡೇಶ್ವರಿ ನಗರ ಜಲಾವೃತ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಸೇರಿ ತಾಲೂಕಿನಾದ್ಯಂತ ಮಂಗಳವಾರ ತಡರಾತ್ರಿ ಸುರಿದ ಮಳೆಗೆ ಪಟ್ಟಣದ ವಾರ್ಡ್ ನಂ-1 ರ ಕೌಡೇಶ್ವರಿ ನಗರ, ಅಗಸ್ತ್ಯತೀರ್ಥದ ಬಳಿ ಇರುವ ಗುಡಿ ರಂಗಾಚಾರ್ಯ ಪ್ಲಾಟ್, ಜನ್ನತ್ ನಗರ, ಕರೆಗೋರಿ ಪ್ಲಾಟ್ ಸೇರಿದಂತೆ ಅನೇಕ ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿ ಸಾರ್ವಜನಿಕರು ಪರದಾಡುವಂತಾಗಿದೆ.

ಈ ಪ್ರದೇಶಗಳಲ್ಲಿ ರಸ್ತೆ, ಚರಂಡಿಗಳು ಇಲ್ಲದೆ ಎಲ್ಲೆಂದರಲ್ಲಿ ನೀರು ಹರಿದು, ನೀರು ಸಂಗ್ರಹವಾಗಿದೆ. ಗಾಳಿ, ಗುಡುಗು-ಸಿಡಿಲಿನಿಂದ ಕೂಡಿದ ಅಬ್ಬರದ ಮಳೆ, ವಿದ್ಯುತ್ ಸಂಪರ್ಕ ಕಡಿತದಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ.

ಸಮಸ್ಯೆಯ ಮಾಹಿತಿ ಪಡೆದ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಮುಖ್ಯಾಧಿಕಾರಿ ಮಹೇಶ ಹಡಪದ ಬುಧವಾರ ಬೆಳಿಗ್ಗೆ ಸಿಬ್ಬಂದಿಗಳೊಂದಿಗೆ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ, ತುರ್ತು ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು. ಈ ವೇಳೆ ಕೌಡೇಶ್ವರಿ ನಗರದ ಜನರು ಮಳೆಗಾಲದಲ್ಲಿ ಪ್ರತಿವರ್ಷ ಇದೇಸಮಸ್ಯೆ ಎದುರಿಸುತ್ತಿದ್ದೇವೆ. ರಸ್ತೆ, ಚರಂಡಿ ಸೇರಿ ಅಗತ್ಯ ಸೌಲಭ್ಯಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ಮಾಜಿ ಅಧ್ಯಕ್ಷ ವಿ.ಜಿ. ಪಡಗೇರಿ, ಕೌಡೇಶ್ವರಿ ನಗರದ ಬಡಾವಣೆಯ ಸಮಸ್ಯೆ ಬಗ್ಗೆ ನಿರ್ಲಕ್ಷ್ಯ ತಾಳುತ್ತಿರುವ ಕುರಿತು ಆಕ್ಷೇಪ ವ್ಯಕ್ತಪಡಿಸಿ, ಮಳೆ ಬಂತೆಂದರೆ ಇಲ್ಲಿನ ಜನರ ಜೀವನ ಅಸ್ತ್ಯವ್ಯಸ್ತವಾಗುತ್ತದೆ. ಇದಕ್ಕೆ ಶೀಘ್ರ ಪರಿಹಾರ ಕ್ರಮ ತೆಗೆದುಕೊಳ್ಳಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಎಂದು ಆಗ್ರಹಿಸಿದರು.

ಈ ವೇಳೆ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಕಂದಾಯ ಅಧಿಕಾರಿ ಹನಮಂತಪ್ಪ ನಂದೆಣ್ಣವರ ನೀಲಪ್ಪ ಪೂಜಾರ, ಶೇಖಪ್ಪ ಕೋರಿ, ಚಂದ್ರಗೌಡ ಪಾಟೀಲ, ನಿಂಗಪ್ಪ ಬನ್ನಿ, ಗಂಗಪ್ಪ ದುರಗಣ್ಣವರ, ಹನಮಂತಪ್ಪ ಗೊಜಗೋಜಿ, ನಾಗಪ್ಪ ಪಡಗೇರಿ ಸೇರಿದಂತೆ ಮುಂತಾದವರು ಇದ್ದರು.

## ಶತಮಾನೋತ್ಸವದ ಸಂಭ್ರಮದಲ್ಲಿ ಹೊಸಮಠದವರ ಮನೆಯ ದೇವಿಪುರಾಣ ಪ್ರವಚನ

# ಹೊಸಮಠ ಮನೆತನದವರ ಕಾರ್ಯ ಐತಿಹಾಸಿಕ

■ವಿಜಯಸಾಕ್ಷಿ ಸುದ್ದಿ, ಗದಗ

ದೇವಿ ಪುರಾಣ ದೇಹದ ಪುರಾಣವಾಗಿದೆ. ನಮ್ಮಲ್ಲಿರುವ ದುರ್ಗುಣ ಅಳಿದು ಸದ್ಗುಣ ಬೆಳೆಸಿಕೊಂಡರೆ ಮಾನಸಿಕ ನೆಮ್ಮದಿಯನ್ನು ಕಂಡುಕೊಳ್ಳಲು ಸಾಧ್ಯ. ಅಂತಹ ಗಟ್ಟಿಯಾದ ಮನೋಶಕ್ತಿಯನ್ನು ಪಡೆಯಲು ಸಜ್ಜನರ ಸಹವಾಸ, ಪುರಾಣ ಪುಣ್ಯಕಥೆಗಳ ಶ್ರವಣ ಮಾಡುವುದು ತುಂಬಾ ಅವಶ್ಯಕವೆಂದು ಎಚ್.ಎಸ್. ವೆಂಕಟಾಪುರ ಹಾಗೂ ಜಿಗೇರಿಯ ಷ.ಬ್ರ. ಗುರುಸಿದ್ದೇಶ್ವರ ಶಿವಾಚಾರ್ಯರು ಹೇಳಿದರು.

ಅವರು ಪಂಚಲಿಂಗೇಶ್ವರ ಪುಣ್ಯಕ್ಷೇತ್ರ ಖ್ಯಾತಿಯ ಹಿರೇಹಂದಿಗೋಳ ಗ್ರಾಮದ ಹೊಸಮಠ ಅವರ ಮನೆಯಲ್ಲಿ ಶತಮಾನೋತ್ಸವ ಸಂಭ್ರಮದಲ್ಲಿರುವ ದೇವಿ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ದೇವಿಯನ್ನು ಶ್ರದ್ಧಾ-ಭಕ್ತಿಯಿಂದ ಪೂಜಿಸುವುದರಿಂದ ಅಪಾರ ಸುಖ, ಸಮೃದ್ಧಿ, ಯಶಸ್ಸು ದೊರೆಯಲಿದೆ. 1924ರಲ್ಲಿ ಪ್ರಪ್ರಥಮವಾಗಿ ಹೊಸಮಠ ಅವರ ಮನೆಯಲ್ಲಿ ಚಿಕ್ಕ ಹಂದಿಗೋಳ ಗ್ರಾಮದ ವೇದಮೂರ್ತಿ



ಶಂಕ್ರಯ್ಯಜ್ಜ ತಾಳಿಕೋಟಿಮಠ ದೇವಿ ಪುರಾಣ ಪ್ರಾರಂಭಿಸಿದರು. ಅವರ ನಂತರ ವೇದಮೂರ್ತಿ ಗುರುಸಿದ್ದಯ್ಯನವರು ಹೊಸಮಠ ನಡೆಸಿಕೊಂಡು ಬಂದರು. ಅವರ ನಂತರ ವೇದಮೂರ್ತಿ ಚನ್ನಮಲ್ಲಯ್ಯ ಹೊಸಮಠ ನಡೆಸಿದರು. ನಂತರ ವೇದಮೂರ್ತಿ ಬಸಯ್ಯ ಹೊಸಮಠ ನಡೆಸಿಕೊಂಡು ಬಂದರೆ, ಪ್ರಸ್ತುತ ಅವರ ಮೊಮ್ಮಕ್ಕಳಾದ ವೇದಮೂರ್ತಿ ಶಂಕ್ರಯ್ಯ ವೇದಮೂರ್ತಿ ವೀರಯ್ಯ ದೇವಿ ಪುರಾಣ ಪ್ರವಚನ ಮುನ್ನಡೆಸಿಕೊಂಡು ಬರುತ್ತಿದ್ದಾರೆ.



ಕಳೆದ ನೂರು ವರ್ಷಗಳ ಕಾಲ ಅವ್ಯಾಹತವಾಗಿ ಗ್ರಾಮದಲ್ಲಿ ದೇವಿ ಪುರಾಣ ಪ್ರವಚನ ಆಯೋಜಿಸುತ್ತ ಜನರಲ್ಲಿ ಧಾರ್ಮಿಕ ಮನೋಭಾವನೆ ಬೆಳೆಸುವಲ್ಲಿ ಮಹತ್ವ ಪೂರ್ಣ ಕಾರ್ಯ ಮಾಡುತ್ತಿರುವ ಹೊಸಮಠ ಮನೆತನದವರ ಈ ಪುಣ್ಯ ಕಾರ್ಯ ಐತಿಹಾಸಿಕ ಕಾರ್ಯಕ್ರಮವಾಗಿರುವುದು ಹೆಮ್ಮೆಯ ವಿಷಯ ಎಂದು ಪೂಜ್ಯ ಶಿವಾಚಾರ್ಯರು ಸಂತಸ ವ್ಯಕ್ತಪಡಿಸಿದರು.

ದೇವಿ ಪುರಾಣ ಶತಮಾನೋತ್ಸವದ ಸವಿ ನೆನಪಿಗಾಗಿ ಗ್ರಾಮದ ಎಲ್ಲಾ ದೇವಸ್ಥಾನ, ಮಸೀದಿಗೆ ಸದ್ಬಳಕೆ ಮಾಡಿಕೊಳ್ಳಲು ತಲಾ (10001) ಹತ್ತು ಸಾವಿರದ ಒಂದು ರೂಪಾಯಿಗಳನ್ನು ಭಕ್ತಿ ಕಾಣಿಕೆ ಸಮರ್ಪಣೆ ಮಾಡಿದ ಹೊಸಮಠ ಮನೆತನದ ಕಾರ್ಯ ಮೆಚ್ಚುವಂಥದ್ದು. ದೇವಿ ಪುರಾಣ ಪ್ರವಚನ ಮುನ್ನಡೆಸಿಕೊಂಡು ಬರುತ್ತಿರುವ ಹೊಸಮಠದ 4ನೇ ತಲೆಮಾರಿನ ರಾಮ-ಲಕ್ಷ್ಮಣರಂತಿರುವ ವೇದಮೂರ್ತಿ ಶಂಕ್ರಯ್ಯ ಹೊಸಮಠ ಹಾಗೂ ವೇದಮೂರ್ತಿ ವೀರಯ್ಯ ಹೊಸಮಠ ಅವರಿಂದ ಇನ್ನೂ ಹೆಚ್ಚು ಹೆಚ್ಚು ಧಾರ್ಮಿಕ ಕಾರ್ಯಗಳು ಜರುಗಲಿ. ಅಂತಹ ಶಕ್ತಿಯನ್ನು ಆ ಜಗನ್ಮಾತೆ ಅವರಿಗೆ ದಯಪಾಲಿಸಲಿ ಎಂದು ಪೂಜ್ಯರು ಶುಭ ಹಾರೈಸಿದರು.

ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ನಟಗಲ್ಲೇಶ್ವರ ಭಜನಾ ಸಂಘದೊಂದಿಗೆ ಸುಮಂಗಲಿಯರು ದೇವಿ ಗುಡಿಗೆ ತೆರಳಿ ಉಡಿ ತುಂಬುವ ಕಾರ್ಯಕ್ರಮ ನೆರವೇರಿಸಿದರು. ಗ್ರಾಮದ ಹಿರಿಯರಾದ ವೀರನಗೌಡ ಜಕ್ಕನಗೌಡ್ರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಈ ಸಮಯದಲ್ಲಿ ಉಪಸ್ಥಿತರಿದ್ದ ಭಕ್ತರಿಗೆ ಗೋಧಿ ಹುಗ್ಗಿ ಪ್ರಸಾದ ವಿತರಿಸಲಾಯಿತು ಎಂದು ಗ್ರಾಮದ ಸಮಾಜ ಸೇವಾ ಕಾರ್ಯಕರ್ತ ಶಿವಶಂಕರಪ್ಪ ಡಿ.ಆರಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ದೇವಿ ಪುರಾಣ ಪ್ರವಚನಕಾರರಾಗಿ ವೇ.ಮೂ. ವೀರಯ್ಯ ಬಸಯ್ಯ ಹೊಸಮಠ ಹಾಗೂ ಪಠಣಕಾರರಾಗಿ ಚಿಕ್ಕಹಂದಿಗೋಳ ಗ್ರಾಮದ ವೇ.ಮೂ. ವೀರಯ್ಯ ತಾಳಿಕೋಟಿಮಠ ಕಾರ್ಯ ನಿರ್ವಹಿಸುತ್ತಿದ್ದಾರೆ. ಕಳೆದ 48 ವರ್ಷಗಳಿಂದ ಗ್ರಾಮದ ಎಂ.ಎಚ್. ಮಡಿಕೇರಿ ಸಂಗೀತ ಸೇವೆ ಸಲ್ಲಿಸುತ್ತಾ ಪುರಾಣ ಕಾರ್ಯಕ್ರಮಕ್ಕೆ ಹೆಚ್ಚಿನ ಮೆರಗು ನೀಡುತ್ತಿದ್ದಾರೆ. ಶರಣಯ್ಯ ಯಲಬುರ್ಗಿಮಠ ನಿತ್ಯ ದೇವಿಗೆ ಅಲಂಕಾರ, ಪೂಜಾ ಕಾರ್ಯವನ್ನು ನೆರವೇರಿಸುತ್ತಿದ್ದಾರೆ.

## ಸ್ಥಾಯಿ ಸಮಿತಿ ನೂತನ ಚೇರಮನ್ ಮುದಿಯಪ್ಪ ಮುಧೋಳರಿಗೆ ಸನ್ಮಾನ

# ಪಟ್ಟಣದ ಅಭಿವೃದ್ಧಿಗೆ ಆದ್ಯತೆ ನೀಡುವೆ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ


ಒಲಿದಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಪಟ್ಟಣದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ಪುರಸಭೆ ಸ್ಥಾಯಿ ಸಮಿತಿ ನೂತನ ಚೇರಮನ್ ಮುದಿಯಪ್ಪ ಮುಧೋಳ ಹೇಳಿದರು.

ಪುರಸಭೆಯ ಸ್ಥಾಯಿ ಸಮಿತಿ ಚೇರಮನ್‌ರಾಗಿ ಆಯ್ಕೆಯಾದ ಬಳಿಕ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪುರಸಭೆ ಅಧ್ಯಕ್ಷರ ಹಾಗೂ ಸದಸ್ಯರ ಸಹಕಾರ ಪಡೆದು ಪಟ್ಟಣದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಾಗೂ ಸ್ಥಾಯಿ ಸಮಿತಿ ವ್ಯಾಪ್ತಿಯ ಕಾರ್ಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತೇನೆ. ಸಿಕ್ಕಿರುವ ಅವಕಾಶ ಸದ್ಬಳಕೆ ಮಾಡಿಕೊಂಡು ತ್ವರಿತಗತಿಯಲ್ಲಿ ಸಮಸ್ಯೆಗಳಿಗೆ ಪರಿಹಾರ ನೀಡಲು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸುತ್ತೇನೆ.

ಅವಕಾಶ ನೀಡಿದ ಶಾಸಕ ಜಿ.ಎಸ್. ಪಾಟೀಲರಿಗೆ, ಪಕ್ಷದ ವರಿಷ್ಠರಿಗೆ, ಬೆಂಬಲ ಸೂಚಿಸಿದ ಪುರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸರ್ವ ಸದಸ್ಯರು ನೀಡುವ ಸಲಹೆ, ಸೂಚನೆಗಳನ್ನು ಮುಕ್ತ ಮನಸ್ಸಿನಿಂದ ಸ್ವೀಕರಿಸಿ ಪಟ್ಟಣದ ಅಭಿವೃದ್ಧಿಗೆ ಆದ್ಯತೆ ನೀಡುತ್ತೇನೆ ಎಂದರು. ಇದಕ್ಕೂ ಮುನ್ನ ಸ್ಥಾಯಿ ಸಮಿತಿ ಚೇರಮನ್‌ರಾಗಿ ಆಯ್ಕೆಯಾದ ಮುದಿಯಪ್ಪ ಮುಧೋಳ ಅವರಿಗೆ ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ಸೇರಿ ಅಧಿಕಾರಿಗಳು ಸನ್ಮಾನಿಸಿದರು. ಬಳಿಕ ಪುರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಮತ್ತು ಸದಸ್ಯರು ಸನ್ಮಾನಿಸಿ ಅಭಿನಂದಿಸಿದರು.

ಗಜೇಂದ್ರಗಡ ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ, ಉಪಾಧ್ಯಕ್ಷೆ ಸವಿತಾ ಬಿದರಳ್ಳಿ, ಸ್ಥಾಯಿ ಸಮಿತಿ ಚೇರಮನ್ ಮುದಿಯಪ್ಪ ಮುಧೋಳ, ಸದಸ್ಯರಾದ ಶಿವರಾಜ ಘೋರ್ಪಡೆ, ರಾಜು ಸಾಂಗ್ಲೀಕರ, ವೆಂಕಟೇಶ ಮುದಗಲ್, ಮುರ್ತುಜಾ ಡಾಲಾಯತ, ಲಕ್ಷ್ಮೀ ಮುಧೋಳ, ದ್ರಾಕ್ಷಾಯಿಣಿ ಚೋಳಿನ, ವಿಜಯಾ ಮಳಗಿ, ಕೌಸರಬಾನು ಹುನಗುಂದ, ನಾಮ ನಿರ್ದೇಶಿತ ಸದಸ್ಯರಾದ ಬಸವರಾಜ ಹೂಗಾರ, ಸುಮಗಂಲಾ ಇಟಗಿ, ಉಮೇಶ ರಾಠೋಡ, ಹಾಗೂ ಶ್ರೀಧರ ಬಿದರಳ್ಳಿ ಸೇರಿದಂತೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇದ್ದರು.

# ಭಸ್ಮದಲ್ಲಿ ಸಾತ್ವಿಕತೆಯ ಶಕ್ತಿ ಇದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಣೆಯಲ್ಲಿ ವಿಭೂತಿ, ಕೊರಳಲ್ಲಿ ಲಿಂಗ ಮತ್ತು ರುದ್ರಾಕ್ಷಿ ಧಾರಣೆ ವೀರಶೈವ ಲಿಂಗಾಯತ ಧರ್ಮದ ಪ್ರಮುಖ ಆಚರಣೆಗಳು. ನಿತ್ಯವೂ ಇವುಗಳನ್ನು ಪಾಲಿಸಬೇಕಾದುದು ಪ್ರತಿಯೊಬ್ಬನ ಕರ್ತವ್ಯವಾಗಿದೆ. ನೀವು ಹಣೆಯಲ್ಲಿ ಧರಿಸುವ ಭಸ್ಮದಲ್ಲಿ ಸಾತ್ವಿಕತೆಯ ಕಳೆ ಇದೆ ಎಂದು ಶ್ರೀಮದ್ ಜಗದ್ಗುರು ರಂಭಾಪುರಿ ಶ್ರೀಗಳು ನುಡಿದರು. ಅಬ್ಬಿಗೇರಿಯ ಹೊಸ ಹಿರೇಮಠದಲ್ಲಿ 4ನೇ ದಿನದ ಇಷ್ಟಲಿಂಗ ಮಹಾಪೂಜೆಯನ್ನು ನೆರವೇರಿಸಿದ ನಂತರ ಅವರು ಆಶೀರ್ವಚನ ನೀಡಿ ಭಸ್ಮದ ಮಹಿಮೆಯನ್ನು ತಿಳಿಸಿದರು. ವಿಭೂತಿ, ಬಸಿತ, ಭಸ್ಮ, ರಕ್ಷಾ ಮತ್ತು ಕ್ಷಾರ ಎಂಬ ಐದು ಭಸ್ಮಗಳು ನಂದಾ, ಭದ್ರಾ, ಸುರಭಿ, ಸುಶೀಲ ಮತ್ತು ಸುಮನ ಎಂಬ ಐದು ಹಸುಗಳ ಶುದ್ಧ ಗೋಮಯದಿಂದ ತಯಾರಾಗುತ್ತವೆ. ವಿಭೂತಿ ಧಾರಣೆಯಿಂದ ಸಂಪತ್ತು, ಬಸಿತ ಧಾರಣೆಯಿಂದ ಶಿವಜ್ಞಾನ, ಭಸ್ಮ ಧಾರಣೆಯಿಂದ ತಾಪ-ಪಾಗಳು ದೂರ, ರಕ್ಷಾ ಧಾರಣೆಯಿಂದ ಚರ್ಮ ರೋಗಗಳು ಇಲ್ಲವಾಗುತ್ತವೆ ಮತ್ತು ಕ್ಷಾರ ಧಾರಣೆಯಿಂದ ದುಷ್ಟ ಶಕ್ತಿಗಳ ಕಾಟವೇನಾದರೂ ಇದ್ದರೆ ಅದು ತೊಲಗಿ ಹೋಗುತ್ತದೆ. ಇಷ್ಟೊಂದು ಶಕ್ತಿ ಭಸ್ಮ ಮತ್ತು ವಿಭೂತಿಯಲ್ಲಿರುವಾಗ ಅದನ್ನು ಧರಿಸಲು ನೀವು ಯಾವುದೇ ಕಾರಣಕ್ಕೂ ಹಿಂದೇಟು ಹಾಕಬಾರದು ಎಂದು ಜಗದ್ಗುರುಗಳು ಹೇಳಿದರು. ಸಭೆಯನ್ನುದ್ದೇಶಿಸಿ ಬಾದಾಮಿಯ ಶ್ರೀಗಳು ಮಾತನಾಡಿದರು. ಸಿದ್ದರಬೆಟ್ಟ-ಹಿರೇಮಠ ಅಬ್ಬಿಗೇರಿಯ ಶ್ರೀ ವೀರಭದ್ರ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗದಗನ ರುದ್ರಾಣಿ ಬಳಗದವರು ರುದ್ರ ಪಠಣ ಮಾಡಿ ಗಮನ ಸೆಳೆದರು.

## ಕೃಷಿ ಪರಿಕರ ಮಾರಾಟಗಾರರ ಸಭೆಯಲ್ಲಿ ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಸೂಚನೆ

# ಖರೀದಿಗೆ ಕಡ್ಡಾಯವಾಗಿ ರಸೀದಿ ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿ ಪರಿಕರ ಮಾರಾಟಗಾರರು ಕಡ್ಡಾಯವಾಗಿ ತಮ್ಮ ಅಂಗಡಿಗಳಲ್ಲಿ ಗೊಬ್ಬರದ ದಾಸ್ತಾನು, ದರಪಟ್ಟಿ ಪ್ರಕಟಿಸಬೇಕು ಮತ್ತು ರೈತರು ಖರೀದಿಸಿದ ರಸಗೊಬ್ಬರ, ಬೀಜ, ಕ್ರಿಮಿನಾಶಕ ಸೇರಿ ಇತರೇ ಕೃಷಿ ಸಾಮಗ್ರಿಗಳಿಗೆ ಕಡ್ಡಾಯವಾಗಿ ರಸೀದಿ ಕೊಡಬೇಕು ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಬುಧವಾರ ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಕೃಷಿ ಇಲಾಖೆಯ ವತಿಯಿಂದ ತಾಲೂಕಿನ ಕೃಷಿ ಪರಿಕರ (ರಸಗೊಬ್ಬರ, ಬೀಜ, ಕೀಟನಾಶಕ) ಮಾರಾಟಗಾರರ ಗುಣ ನಿಯಂತ್ರಣದ ಬಗ್ಗೆ ತಿಳುವಳಿಕೆ ಮತ್ತು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಕರೆದಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ವೇಳೆ ಸಹಾಯಕ ಕೃಷಿ ನಿರ್ದೇಶಕ(ಜಾರಿದಳ) ರಾಘವೇಂದ್ರ ಬೊಮ್ಮಿಗಟ್ಟಿ ಮಾತನಾಡಿ, ಈ ಬಾರಿ ಹಿಂಗಾರು ಹಂಗಾಮಿನಲ್ಲಿ ಕೊಂಚ ತಡವಾದರೂ




ಉತ್ತಮ ಮಳೆಯಾಗಿದೆ. ಲಕ್ಷ್ಮೇಶ್ವರ ತಾಲೂಕಿನಲ್ಲಿ ಹಿಂಗಾರಿ ಹಂಗಾಮಿಗೆ ಒಟ್ಟು 33 ಸಾವಿರ ಹೆಕ್ಟೇರ್ ಕ್ಷೇತ್ರದಲ್ಲಿ ಬಿತ್ತನೆಯಾಗಲಿದ್ದು, ಅದರಲ್ಲಿ ಶೇ.90ರಷ್ಟು ಕ್ಷೇತ್ರದಲ್ಲಿ ಕಡಲೆ ಬಿತ್ತನೆಯಾಗಲಿದೆ. ಈಗಾಗಲೇ ಕೆಲ ರೈತರು ಕೃಷಿ ಇಲಾಖೆ ಮತ್ತು ಕೃಷಿ ಪರಿಕರ ಮಾರಾಟಗಾರರಿಂದ ಬೀಜ, ಗೊಬ್ಬರ ಖರೀದಿಸಿಟ್ಟುಕೊಂಡಿದ್ದಾರೆ. ಉತ್ತಮ ಮಳೆಯಾಗಿದ್ದರಿಂದ ರಸಗೊಬ್ಬರದ ಬೇಡಿಕೆ ಹೆಚ್ಚಲಿದೆ. ರೈತರಿಗೆ ಡಿಎಪಿ ಗೊಬ್ಬರದ ಬದಲಾಗಿ ಸಾರಜನಕ, ರಂಜಕ, ಪೋಟ್ಯಾಷ್ ಯುಕ್ತ ಕಾಂಪ್ಲೆಕ್ಸ್ ಗೊಬ್ಬರ ಬಳಸುವಂತೆ ತಿಳುವಳಿಕೆ ಮತ್ತು ಮನವರಿಕೆ ಮಾಡಿಕೊಡಬೇಕು.

> ಮಾರಾಟಗಾರರು ಗೌಪ್ಯವಾಗಿ ರಸಗೊಬ್ಬರ ಸಂಗ್ರಹಿಸಿ, ಹೆಚ್ಚಿನ ದರದಲ್ಲಿ ಮಾರಾಟ ಮಾಡುವ ಬಗ್ಗೆ ಮಾಹಿತಿ ಬಂದರೆ ಅಂತವರ ಮೇಲೆ ಕ್ರಮ ಕೈಗೊಳ್ಳಲಾಗುವುದು. ಲೈಸನ್ಸ್ ನವೀಕರಣಗೊಳಿಸಿ ಅಧಿಕೃತ ಡೀಲರ್‌ಗಳಿಂದ ಬೀಜ, ಗೊಬ್ಬರ ಖರೀದಿಸಿ ನಿಗದಿತ ದರದಲ್ಲಿ ಮಾರಾಟ ಮಾಡಬೇಕು ಎಂದು ರಾಘವೇಂದ್ರ ಬೊಮ್ಮಿಗಟ್ಟಿ ಸೂಚಿಸಿದರು.

ಸಭೆಯ ಬಳಿಕ ಕೃಷಿ ಪರಿಕರ ಮಾರಾಟದ ಅಂಗಡಿಗಳಿಗೆ ಬೇಟಿ ನೀಡಿ ಪರಿಶೀಲಿಸಿ ಸಲಹೆ-ಸೂಚನೆ ನೀಡಲಾಯಿತು. ಗುಣಮಟ್ಟ ಪರೀಕ್ಷೆಗಾಗಿ ಪರಿಕರಗಳನ್ನು ಸ್ಯಾಂಪಲ್ ಪಡೆಯಲಾಯಿತು. ಈ ವೇಳೆ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ತಾಲೂಕು ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಬಿಸನಳ್ಳಿ, ಕೃಷಿ ಅಧಿಕಾರಿ ಚಂದ್ರಶೇಕರ ನರಸಮ್ಮನವರ, ಕೃಷಿ ಮಾರಾಟಗಾರರ ಸಂಘದ ಅಧ್ಯಕ್ಷ ಅಶೋಕ ಬಟಗುರ್ಕಿ ಸೇರಿ ಮಾರಾಟಗಾರರು ಇದ್ದರು.

## ರಸ್ತೆ ಮೇಲೆ ಹರಿದ ಚರಂಡಿ ನೀರು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಗುರುವಾರ ಸಂಜೆ ಜೋರಾಗಿ ಮಳೆ ಸುರಿದ ಪರಿಣಾಮ ಪೇಟೆಯಲ್ಲಿ ಸೇರಿದ್ದ ಸಾವಿರಾರು ಜನರು ಪರದಾಡುವಂತಾಯಿತು. ಸಂಜೆ ಸುಮಾರು 7 ಗಂಟೆಗೆ ಆರಂಭವಾದ ಮಳೆ ಅರ್ಧ ಗಂಟೆ ನಿರಂತರವಾಗಿ ಸುರಿಯಿತು.

ಬಿಡದೇ ಸುರಿದ ಮಳೆಗೆ ಬಜಾರದಲ್ಲಿ ಚರಂಡಿ ನೀರು ರಸ್ತೆ ಮೇಲೆ ಹರಿಯಿತು. ಇದರಿಂದಾಗಿ ದಸರಾ ಹಬ್ಬದ ಖರೀದಿಗಾಗಿ ಸಂತೆಗೆ ಬಂದಿದ್ದ ಸಾರ್ವಜನಿಕರು ರಾಡಿ ನೀರಿನಲ್ಲಿಯೇ ಹಬ್ಬದ ಖರೀದಿ ಮಾಡಿದರು. ಶುಕ್ರವಾರ ಖಂಡೆ ಪೂಜೆ ಇರುವುದರಿಂದ ಗುರುವಾರ ಲಕ್ಷ್ಮೇಶ್ವರ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳಿಂದ ಸಾಕಷ್ಟು ಸಂಖ್ಯೆಯಲ್ಲಿ ಜನ ಪೇಟೆಗೆ ಬಂದಿದ್ದರು.

ಚರಂಡಿ ಕಟ್ಟಿಕೊಂಡಿದ್ದರಿಂದ ಮುಂದೆ ಹರಿದು ಹೋಗಬೇಕಾಗಿದ್ದ ಗಲೀಜು ನೀರು ಏಕಾಏಕಿ ರಸ್ತೆ ಮೇಲೆ ನುಗ್ಗಿತು. ರಾಡಿ ನೀರು ಒಮ್ಮೆಲೇ ರಸ್ತೆ ಮೇಲೆ ಬಂದ ಪರಿಣಾಮ ಜನರಿಗೆ ಕಿರಿಕಿರಿ ಉಂಟಾಯಿತು. ಪ್ರತಿ ಮಳೆಗಾಲದಲ್ಲಿ ಈ ರೀತಿ ಚರಂಡಿ ರಸ್ತೆ ಮೇಲೆ ಹರಿಯುತ್ತದೆ. ಆದರೂ ಕೂಡ ಸಂಬಂಧಿಸಿದ ಪುರಸಭೆ ಅಧಿಕಾರಿಗಳು ಸಮಸ್ಯೆ ಪರಿಹರಿಸಲು ಮುಂದಾಗುತ್ತಿಲ್ಲ ಎಂದು ಜನರು ಬೇಸರ ವ್ಯಕ್ತಪಡಿಸಿದರು.

### ನವೆಂಬರ್ 4ರಿಂದ 21ರವರೆಗೆ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ

# ಅಭಿಯಾನದ ಯಶಸ್ಸಿಗೆ ಸಹಕರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾದ್ಯಂತ ನವೆಂಬರ್ 4ರಿಂದ 21ರವರೆಗೆ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ (ಎಲ್‌ಸಿಡಿಸಿ) ಹಮ್ಮಿಕೊಳ್ಳಲಾಗುತ್ತಿದ್ದು, ಅಭಿಯಾನದ ಯಶಸ್ಸಿಗೆ ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ಗುರುವಾರ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ 2024-25ನೇ ಸಾಲಿನಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ (ಎಲ್‌ಸಿಡಿಸಿ) ಹಮ್ಮಿಕೊಳ್ಳುವ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್‌ಸಿಡಿಸಿ ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳು ಹಾಗೂ ಶಿಕ್ಷಕರ ಭಾಗವಹಿಸುವಿಕೆ ಮುಖ್ಯವಾಗಿದೆ. ಪ್ರತಿ ಗ್ರಾಮ ಪಂಚಾಯತ್‌ನಿಂದ ಸದರಿ ಅಭಿಯಾನದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಗ್ರಾಮ ಪಂಚಾಯತ್‌ನಿಂದ ಕಸದ ವಿಲೇವಾರಿ ವಾಹನದ ಮುಖಾಂತರ ಅಭಿಯಾನದ ಕುರಿತು ಮೈಕಿಂಗ್ ಮಾಡಿಸುವುದು, ಧಾರ್ಮಿಕ ಕ್ಷೇತ್ರಗಳಲ್ಲಿ ಹಾಗೂ ಪ್ರತಿನಿತ್ಯ ಗ್ರಾಮ ಮಟ್ಟದಲ್ಲಿ ಡಂಗುರ ಸಾರುವುದು. ಒಟ್ಟಾರೆಯಾಗಿ ಅಭಿಯಾನ ವ್ಯವಸ್ಥಿತವಾಗಿ ಜರುಗಿಸಬೇಕೆಂದು ಭರತ್ ಎಸ್ ತಿಳಿಸಿದರು.



ಇದೇ ಸಂದರ್ಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ (ಕುಷ್ಟ ರೋಗ ವಿಭಾಗ)ದ ಭಿತ್ತಿ ಪತ್ರವನ್ನು ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ, ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ವೈ.ಕೆ. ಭಜಂತ್ರಿ, ಜಿಲ್ಲಾ ಕ್ಷಯ ರೋಗ ನಿರ್ಮೂಲನಾ ಅಧಿಕಾರಿ ಡಾ. ಅರುಂಧತಿ ಕುಲಕರ್ಣಿ, ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ರೂಪಸೇನ ಚವ್ಹಾಣ ಸೇರಿದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಅವರು ಮಾತನಾಡಿ, ಎಲ್‌ಸಿಡಿಸಿ ಸಮೀಕ್ಷಾ ಕಾರ್ಯಕ್ರಮವನ್ನು ನವೆಂಬರ್ 4ರಿಂದ 21ರವರೆಗೆ (ರಜಾ ದಿನಗಳನ್ನು ಹೊರತುಪಡಿಸಿ) ಹಮ್ಮಿಕೊಳ್ಳಲಾಗುತ್ತಿದ್ದು, ಸಮೀಕ್ಷಾ ಕಾರ್ಯದ ಮೇಲ್ವಿಚಾರಣೆಗಾಗಿ 10 ಸಮೀಕ್ಷಾ ತಂಡಗಳಿಗೆ ಓರ್ವ ಮೇಲ್ವಿಚಾರಕರನ್ನು ನಿಯಮಿಸಲಾಗುವುದು. ಜಿಲ್ಲೆಯಲ್ಲಿ 813 ಸಮೀಕ್ಷಾ ತಂಡಗಳ ಕ್ರಿಯಾ ಯೋಜನೆ ರಚಿಸಲಾಗಿದೆ. ಜಾಥಾ ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳನ್ನು ಹಾಗೂ ನಗರ ಪ್ರದೇಶಗಳಲ್ಲಿ ಎಲ್‌ಸಿಡಿಸಿ ಸಮೀಕ್ಷಾ ಕಾರ್ಯದಲ್ಲಿ ಎನ್‌ಸಿಸಿ ಹಾಗೂ ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಸಭೆಗೆ ವಿವರಿಸಿದರು.


### ಜಾತಿ ಗಣತಿ ಮಂಡನೆಗೆ ವೀರಶೈವ ಲಿಂಗಾಯತ ಪಂಚಮಸಾಲಿಗರ ವಿರೋಧ: ಬಸವರಾಜ ದಿಂಡೂರ

# ಜಾತಿ ಗಣತಿ ಆಯೋಗಗಳ ವರದಿ ಅವೈಜ್ಞಾನಿಕ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರಕಾರ ಇದೇ ಅಕ್ಟೋಬರ್ 18ರಂದು ಸಚಿವ ಸಂಪುಟದ ಮುಂದೆ ಮಂಡಿಸಲು ನಿರ್ಧರಿಸಿರುವ ಜಾತಿ ಗಣತಿ ವರದಿಯನ್ನು ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘವು ವಿರೋಧಿಸುತ್ತದೆ ಎಂದು ಸಂಘದ ಮಾಜಿ ಅಧ್ಯಕ್ಷ ಬಸವರಾಜ ದಿಂಡೂರ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸರಕಾರ ನೇಮಿಸಿದ ಎರಡೂ ಜಾತಿ ಗಣತಿ ಆಯೋಗಗಳ ವರದಿ ಅವೈಜ್ಞಾನಿಕವಾಗಿದ್ದು, ಅದರಲ್ಲಿ ಯಾವ ಜಾತಿಗಳ ಹೆಸರನ್ನು ಬಹಿರಂಗವಾಗಿ ಹೇಳಬಾರದೋ ಅಂತಹ ಜಾತಿಗಳನ್ನು ನಮೂದಿಸಿರುವುದು ವಿರೋಧಕ್ಕೆ ಕಾರಣವಾಗಿದೆ. ಇದನ್ನು ನಮ್ಮ ಸಂಘದ ರಾಷ್ಟ್ರೀಯ ಅಧ್ಯಕ್ಷರಾಗಿರುವ ಶಾಮನೂರು ಶಿವಶಂಕರಪ್ಪನವರೂ ವಿರೋಧಿಸಿದ್ದು, ಸರಕಾರ ಈ ವಿರೋಧವನ್ನು ಲೆಕ್ಕಿಸದೆ ವರದಿಯನ್ನು ಮಂಡನೆ ಮಾಡಿದರೆ ಮುಂದಿನ ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದಿದ್ದಾರೆ.



ಭಾರತದ ಪ್ರಪ್ರಥಮ ಮಹಿಳಾ ಸ್ವಾತಂತ್ರ್ಯ ಹೋರಾಟಗಾರ್ತಿಯೆಂದರೆ ಅದು ಕಿತ್ತೂರು ರಾಣಿ ಚನ್ನಮ್ಮ. ಚನ್ನಮ್ಮ ಥ್ಯಾಕರೆಯನ್ನು ಕೊಂದು ಬರುವ ಅಕ್ಟೋಬರ್ 24ಕ್ಕೆ 200 ವರ್ಷಗಳಾಗುತ್ತವೆ. ಇದರ ಅಂಗವಾಗಿ 23ರಿಂದ ಒಂದು ವರ್ಷ ಕಾಲ ಹರಿಹರ ಪಂಚಮಸಾಲಿ ಪೀಠದಿಂದ ಚನ್ನಮ್ಮನ ನಡಿಗೆ ಹಳ್ಳಿ ಕಡೆಗೆ ಎಂಬ ರಥಯಾತ್ರೆಯನ್ನು ಹೊರಡಿಸಲಾಗುತ್ತಿದ್ದು, ಇದಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಚಾಲನೆ ನೀಡಲಿದ್ದಾರೆ. ನಾಡಿನ ಜನರಲ್ಲಿ ಧೈರ್ಯ, ಶೌರ್ಯ, ಸಾಹಸಗಳನ್ನು ಬೆಳೆಸುವುದರೊಂದಿಗೆ ನಾಡಿನ ಬಗ್ಗೆ ಅಭಿಮಾನವನ್ನು ಮೂಡಿಸುವುದು ಈ ರಥಯಾತ್ರೆಯ ಉದ್ದೇಶ. ಇದು ರಾಜ್ಯದ 243 ತಾಲೂಕುಗಳಲ್ಲಿ ಸಂಚರಿಸಲಿದೆ ಎಂದು ದಿಂಡೂರ ತಿಳಿಸಿದ್ದಾರೆ.

ತಾಲೂಕು ಮಟ್ಟದಲ್ಲಿ ವಿಜೇತರಾದ ಮೂವರಿಗೆ ಪ್ರಮಾಣ ಪತ್ರ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಗುತ್ತಿದೆ. ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಪ್ರಥಮ 5000ರೂ. ದ್ವಿತೀಯ 2000ರೂ. ಮತ್ತು ತೃತೀಯ 1000ರೂ.ಗಳನ್ನು ನೀಡಲಾಗುತ್ತಿದೆ. ಜಿಲ್ಲಾ ಮಟ್ಟದ ಸ್ಪರ್ಧೆಗಳು ನವಂಬರ್‌ನಲ್ಲಿ ಜರುಗುತ್ತವೆ. ಡಿಸೆಂಬರ್ 6ರಂದು ಹರಿಹರ ಪೀಠದಲ್ಲಿ ರಾಜ್ಯ ಮಟ್ಟದ ಸ್ಪರ್ಧೆ ಜರುಗಲಿದ್ದು, ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸಲಿದ್ದಾರೆ. ಪ್ರಥಮ 25000ರೂ. ದ್ವಿತೀಯ 15000 ರೂ ಮತ್ತು ತೃತೀಯ 10000 ರೂ.ಗಳನ್ನು ಪ್ರತಿ ಸ್ಪರ್ಧೆಗೂ ನೀಡಿ ಗೌರವಿಸಲಾಗುತ್ತದೆ ಎಂದು ದಿಂಡೂರ ತಿಳಿಸಿದ್ದಾರೆ.

ಈ ರಥಯಾತ್ರೆಯ ನಿಮಿತ್ತ ಎಲ್ಲ ವಯೋಮಾನದ, ಎಲ್ಲ ಧರ್ಮೀಯರಿಗೆ ಭಾಷಣ, ವೇಷಭೂಷಣ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದೆ. ಎಲ್ಲವೂ ಕಿತ್ತೂರು ಚನ್ನಮ್ಮನ ಬಗ್ಗೆ ಇರಲಿದ್ದು ಚನ್ನಮ್ಮನ ಧೈರ್ಯ, ಸ್ಥೈರ್ಯ ಮತ್ತು ಸಾಹಸಗಳ ಕುರಿತು 800 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು. ಚನ್ನಮ್ಮನ ವೇಷಭೂಷಣ ತೊಡಬೇಕು. ಮತ್ತು ಚನ್ನಮ್ಮನ ಬಗ್ಗೆ ಭಾಷಣ ಮಾಡಬೇಕು. ಮೂರು ಹಂತಗಳಲ್ಲಿ ಈ ಸ್ಪರ್ಧೆಗಳು ನಡೆಯಲಿದ್ದು, ಮೊದಲು ತಾಲೂಕಾ ಹಂತ, ಜಿಲ್ಲಾ ಹಂತ ಮತ್ತು ರಾಜ್ಯ ಮಟ್ಟದಲ್ಲಿ ನಡೆಯಲಿವೆ.

### ಗದಗ ಎಸ್‌ಎಸ್‌ಕೆ ಸಮಾಜದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಆರ್.ಕೆ. ಹಬೀಬ

# ಉನ್ನತ ಶಿಕ್ಷಣಕ್ಕೆ ಒತ್ತು ನೀಡಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಎಸ್‌ಎಸ್‌ಕೆ ಸಮಾಜದ ವತಿಯಿಂದ ಜಗದಂಬಾ ಶಿಕ್ಷಣ ಸಂಸ್ಥೆಯ ಮೂಲಕ ಈಗಾಗಲೇ ಎಲ್‌ಕೆಜಿಯಿಂದ ಎಸ್‌ಎಸ್‌ಎಲ್‌ಸಿವರೆಗೆ ಶಿಕ್ಷಣ ನೀಡಲಾಗುತ್ತಿದ್ದು, ಮುಂದಿನ ದಿನಮಾನಗಳಲ್ಲಿ ಪದವಿಪೂರ್ವ ಕಾಲೇಜುಗಳನ್ನು ತೆರೆದು ಮಕ್ಕಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಸಮಾಜದ ಹಿರಿಯರು ಹಾಗೂ ನಗರದ ಗಣ್ಯ ಉದ್ಯಮಿಗಳಾದ ಆರ್.ಕೆ. ಹಬೀಬ (ಬುಡ್ಡಣ್ಣ) ಅವರು ಅಭಿಪ್ರಾಯಪಟ್ಟರು.



ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರಬಾರ ವೇದಿಕೆಯಲ್ಲಿ ಜರುಗಿದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಇದಕ್ಕೂ ಮುನ್ನ ಅವರು ಶ್ರೀ ಜಗದಂಬಾ ದೇವಿ ಹಾಗೂ ಶ್ರೀ ತುಳಜಾಭವಾನಿ ದೇವಿಯ ದರ್ಶನ ಪಡೆದರು.

ಇನ್ನೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಉದ್ಯಮಿ ಶಂಕರಸಾ ಪವಾರ ಮಾತನಾಡಿ, ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸಂಘಟಿತರಾಗಿ ಸಮಾಜದ ಅಭಿವೃದ್ಧಿಗಾಗಿ ಶ್ರಮಿಸಬೇಕು. ಸಮಾಜದ ಏಳ್ಗೆಗಾಗಿ ನನ್ನ ಸಹಕಾರ ಸದಾ ಇರುತ್ತದೆ ಎಂದು ಹೇಳಿದರು.

ಬಲರಾಮ ಬಸವಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪಂಚ ಕಮಿಟಿಯ ಸದಸ್ಯರಾದ ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಮಾರುತಿ ಪವಾರ, ಮೋತಿಲಾಲಸಾ ಪೂಜಾರಿ, ಪರಶುರಾಮಸಾ ಬದಿ, ಪ್ರಕಾಶ ಬಾಕಳೆ, ಅಂಬಾಸಾ ಖಟವಟೆ, ಮೋಹನಸಾ ಪವಾರ, ವಿಶ್ವನಾಥಸಾ ಸೂಳಂಕಿ, ಸಾಗರ ಪವಾರ, ಸತೀಶ ದೇವಳೆ, ಶ್ರೀಕಾಂತ ಬಾಕಳೆ, ರಾಘವೇಂದ್ರ ಬಾಂಡಗೆ, ನಾಗರಾಜ ಖೋಡೆ, ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಜಿ.ಎನ್. ಹಬೀಬ ಕಾರ್ಯಕ್ರಮ ನಿರೂಪಿಸಿದರು. ಸುಧೀರ ಕಾಟೀಗರ ವಂದಿಸಿದರು. ಇದಕ್ಕೂ ಮುನ್ನ ಖ್ಯಾತ ಉದ್ಯಮಿ, ಬಡವರ ಬಂಧು ರತನ್ ಟಾಟಾ ಅವರ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ವಹಿಸಿದ್ದರು. ವೇದಿಕೆ ಮೇಲೆ ಪಂಚ ಕಮಿಟಿಯ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ರವಿ ಶಿದ್ಲಿಂಗ, ದಸರಾ ಕಮಿಟಿಯ ಚೇರಮನ್ ವಿಷ್ಣುಸಾ ಶಿದ್ಲಿಂಗ ಹಾಗೂ ಉದ್ಯಮಿ ವಿರೇಶ ಅಂಗಡಿ ಉಪಸ್ಥಿತರಿದ್ದರು.



ಗದಗ ನಗರದ ಸಿದ್ಧಲಿಂಗ ನಗರದ ಶ್ರೀ ಬನ್ನಿಮಹಾಂಕಾಳಿ ಸೇವಾ ಟ್ರಸ್ಟ್ ಕಮಿಟಿ ಹಾಗೂ ಯುವ ಬಳಗದ ವತಿಯಿಂದ ಆಯೋಜಿಸಲಾದ ದಸರಾ ಉತ್ಸವ-2024ರ ನಿಮಿತ್ತ ಗುರುವಾರ ದುರ್ಗಾಷ್ಟಮಿ ಪೂಜೆ ಹಾಗೂ ಪುಟ್ಟ ಮಕ್ಕಳನ್ನು ನವ ದುರ್ಗೆಯರನ್ನಾಗಿ ಶೃಂಗರಿಸಿ ಅಂಬಾಭವಾನಿ ದೇವಸ್ಥಾನಕ್ಕೆ ಉಡಿ ತುಂಬುವ ಮತ್ತು ಮಹಾ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ನೆರೆದಿದ್ದರು.

## ಉಡಚಮ್ಮದೇವಿ ದಸರಾ ಉತ್ಸವದ ಕಾರ್ಯಕ್ರಮಗಳು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ದತ್ತಾತ್ರೇಯ ರಸ್ತೆಯಲ್ಲಿರುವ ಶ್ರೀ ಉಡಚಮ್ಮದೇವಿ ದೇವಸ್ಥಾನದಲ್ಲಿ ಅ.11ರ ಆಯುಧ ಪೂಜೆ ದಿನದಂದು ಬೆಳಿಗ್ಗೆ ದೇವಿಗೆ ಅಭಿಷೇಕ ಜರಗುವುದು. ನಂತರ ಮಂಗಳಾರತಿ, ರಾತ್ರಿ ವಿಶೇಷ ಪುಷ್ಪಾಲಂಕಾರದೊಂದಿಗೆ ಮಹಾಮಂಗಳಾರತಿ ಜರಗುವುದು.

ಅ.12ರ ಶನಿವಾರ ವಿಜಯದಶಮಿಯಂದು ಬೆಳಿಗ್ಗೆ ಮಂಗಳಾರತಿ, ಸಾಯಂಕಾಲ ಅಗ್ನಿ ಹಾಯುವುದು, ನಂತರ ದೇವಿಯ ಪಲ್ಲಕ್ಕಿಯು ಡೊಳ್ಳು ವಾದ್ಯಗಳೊಂದಿಗೆ ತೆರಳಿ ಮುಂಡರಗಿ ರಸ್ತೆಯಲ್ಲಿರುವ ಗೌಡ್ರ ಹೊಲದಲ್ಲಿ ಬನ್ನಿ ಮುಡಿಯುವುದು, ದೇವಸ್ಥಾನದಲ್ಲಿ ಮಹಾಮಂಗಳಾರತಿ ಜರಗುವುದು. ಅ.13ರ ರವಿವಾರ ಮಧ್ಯಾಹ್ನ ಅನ್ನಸಂತರ್ಪಣೆ ಕಾರ್ಯಕ್ರಮ ನೆರವೇರುವುದು.

ಭಕ್ತಾದಿಗಳು ಉಡಚಮ್ಮದೇವಿಯ ನವರಾತ್ರಿ ಉತ್ಸವದ ನಿಮಿತ್ತ ಜರುಗುವ ಸಕಲ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನದ ಸಮಿತಿಯವರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಎಸ್.ಎಸ್.ಕೆ. ದಸರಾ ಉತ್ಸವದ ಇಂದಿನ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಎಸ್.ಎಸ್.ಕೆ. ದಸರಾ ಉತ್ಸವ ಸಮಿತಿ ವತಿಯಿಂದ ಅ.11ರ ರಾತ್ರಿ 8 ಗಂಟೆಗೆ ಆರ್ಕೆಸ್ಟ್ರಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಅಧ್ಯಕ್ಷತೆಯನ್ನು ಉತ್ಸವ ಸಮಿತಿ ಚೇರಮನ್ ಸುರೇಶ ಮೇರವಾಡೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬಿಜೆಪಿ ಮುಖಂಡರಾದ ಶರಣು ಪಾಟೀಲ, ಬೆಟಗೇರಿ ಪಿ.ಎಸ್.ಐ. ಲಕ್ಷ್ಮಣ ಹಾರಿ, ಗದಗ-ಬೆಟಗೇರಿ ನಗರಸಭಾ ಸದಸ್ಯರಾದ ಚಂದ್ರು ಕರಿಸೋಮನಗೌಡ್ರು, ಯುವ ಮುಖಂಡ ಸಂಗಮೇಶ ಕವಳಿಕಾಯಿ, ಗಣ್ಯ ಉದ್ಯಮಿ ವೀರಣ್ಣ ಮೇಟಿ, ಗದಗ-ಬೆಟಗೇರಿ ನಗರಸಭಾ ಸದಸ್ಯರಾದ ಮಾಧೂಸಾ ಮೇರವಾಡೆ, ಬೆಟಗೇರಿ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿ ಸದಸ್ಯ ಲೋಕನಾಥ ಕಬಾಡಿ, ಬೆಟಗೇರಿ ಎಸ್.ಎಸ್.ಕೆ. ತರುಣ ಸಂಘದ ಅಧ್ಯಕ್ಷ ಶ್ರೀಕಾಂತಸಾ ರಾಯಬಾಗಿ ಆಗಮಿಸಲಿದ್ದಾರೆ. ನಂತರ 2024ರ ಸಿ.ಎ. ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿ ಗಿರೀಶ ಭೀಮಸೇನಸಾ ಪವಾರ ಇವರನ್ನು ಸನ್ಮಾನಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ದಸರಾ ಪ್ರಯುಕ್ತ ರಾಜ್ಯ ಮಟ್ಟದ ಟಗರಿನ ಕಾಳಗ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನರಗುಂದ ತಾಲೂಕಿನ ಶಿರೋಳ ಗ್ರಾಮದಲ್ಲಿ ದಸರಾ ಹಬ್ಬದ ಪ್ರಯುಕ್ತ ಅಜ್ಜನ ಜಾತ್ರೆಯ ಪ್ರಯುಕ್ತ ಬೆಟ್ಟದ ಹುಲಿ ಗೆಳೆಯರ ಬಳಗ ಹಾಗೂ ಲಾಲಸಾಬ ಅರಗಂಜಿ ಅಭಿಮಾನಿ ಬಳಗದ ಸಂಯುಕ್ತಾಶ್ರಯದಲ್ಲಿ ಅ.12ರಂದು ಸಾಯಂಕಾಲ 4ರಿಂದ ಸ್ಥಳೀಯ ಬಿ.ಎಮ್. ಪಾಟೀಲ ಆವರಣದಲ್ಲಿ ರಾಜ್ಯ ಮಟ್ಟದ ಜಿದ್ದಾ ಜಿದ್ದಿನ ಟಗರಿನ ಕಾಳಗ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶಿರೋಳ ಜಗದ್ಗುರು ತೋಂಟದಾರ್ಯ ಮಠದ ಮ.ನಿ.ಪ್ರ ಶಾಂತಲಿಂಗ ಮಹಾಸ್ವಾಮಿಗಳು, ಸಮ್ಮುಖವನ್ನು ಅಭಿನವ ಯಚ್ಚರಸ್ವಾಮಿಗಳು ಮತ್ತು ನೇತೃತ್ವವನ್ನು ಅಪ್ಪಯ್ಯ ಶಾಸ್ತ್ರಿಗಳು ಹಿರೇಮಠ ವಹಿಸಿಕೊಳ್ಳಲಿದ್ದಾರೆ. ಸಂಯುಕ್ತ ಪಾಟೀಲ, ವಿವೇಕ್ ಯಾವಗಲ್, ಸಂಕಲ್ಪ ಶೆಟ್ಟರ್, ಪ್ರಭಾವತಿ ಚವಡಿ, ಅಜಯಗೌಡ ಪಾಟೀಲ್, ಲಾಲಸಾಬ ಅರಗಂಜಿ, ರಾಜೂಗೌಡ ಕೆಂಚನಗೌಡ್ರ, ಪ್ರಕಾಶಗೌಡ ತಿರಕನಗೌಡ್ರ, ದ್ಯಾಮಣ್ಣ ಕಾಡಪ್ಪನವರ, ಪ್ರಕಾಶ ಸೊಬರದ, ಹನಮಂತಗೌಡ ತಿರಕನಗೌಡ್ರ, ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಮೊಟರ್ ಸೈಕಲ್, ಫ್ರಿಡ್ಜ್, ಕೂಲರ್ ಸೇರಿದಂತೆ ಆಕರ್ಷಕ ಬಹುಮಾನಗಳನ್ನು ಹೊಂದಿದ್ದು, ಎಲ್ಲ ಬಣ್ಣದ ಟಗರುಗಳಿಗೆ ಮುಕ್ತ ಅವಕಾಶವಿದೆ. ಈಗಾಗಲೇ ಟಗರಿನ ಸ್ಪರ್ಧೆಯಲ್ಲಿ ಬೈಕ್‌ಗಳನ್ನು ಗೆದ್ದ ಟಗರುಗಳಿಗೆ ಅವಕಾಶವಿರುವುದಿಲ್ಲ ಎಂದು ಸಂಘಟಕರು ತಿಳಿಸಿದ್ದಾರೆ.

## ಶ್ರೀ ಜ. ತೋಂಟದಾರ್ಯ ಮಠದಲ್ಲಿ ದಸರಾ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಜಗದ್ಗುರು ತೋಂಟ-ದಾರ್ಯ ಸಂಸ್ಥಾನಮಠದಲ್ಲಿ ಅ.12ರಂದು ಸಾಯಂಕಾಲ 6 ಗಂಟೆಗೆ ಶ್ರೀಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸನ್ನಿಧಾನದಲ್ಲಿ ದಸರಾ ಕಾರ್ಯಕ್ರಮ ನೆರವೇರಲಿದೆ.

ಸದರಿ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಪಾಲ್ಗೊಂಡು ಪೂಜ್ಯ ಜಗದ್ಗುರುಗಳವರ ಕೃಪೆಗೆ ಪಾತ್ರರಾಗಬೇಕೆಂದು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ ವಿನಂತಿಸಿದ್ದಾರೆ.

## ರಾಜ್ಯದ ಸ್ಥಾನಮಾನಕ್ಕೆ ಆಗ್ರಹಿಸುವುದು ನಮ್ಮ ಸಂಪುಟದ ಮೊದಲ ನಿರ್ಣಯ : ಉಮರ್ ಅಬ್ದುಲ್ಲಾ

**■ವಿಜಯಸಾಕ್ಷಿ ಸುದ್ದಿ, ಜಮ್ಮು**

ಜಮ್ಮು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ ನೀಡುವಂತೆ ಆಗ್ರಹಿಸುವುದು ನಮ್ಮ ಸಂಪುಟ ಸಭೆಯ ಮೊದಲ ತೀರ್ಮಾನವಾಗಲಿದೆ ಎಂದು ನ್ಯಾಶನಲ್ ಕಾನ್ಫರೆನ್ಸ್ (ಎನ್‌ಸಿ) ಉಪಾಧ್ಯಕ್ಷ ಉಮರ್ ಅಬ್ದುಲ್ಲಾ ಬುಧವಾರ ಹೇಳಿದ್ದಾರೆ. ಈ ನಿರ್ಣಯವನ್ನು ಬಳಿಕ ಪ್ರಧಾನಿ ನರೇಂದ್ರ ಮೋದಿಯವರ ಬಳಿಕ ಒಯ್ಯಲಾಗುವುದು ಎಂದು ತಿಳಿಸಿದ್ದಾರೆ.

ಸಂವಿಧಾನದ 370ನೇ ವಿಧಿಯ ರದ್ದತಿ ಬಳಿಕ ಜಮ್ಮು ಕಾಶ್ಮೀರ ಕಳೆದುಕೊಂಡಿರುವ ರಾಜ್ಯದ ಸ್ಥಾನಮಾನವನ್ನು ಮರಳಿ ಕೊಡಬೇಕು ಎನ್ನುವುದು ನಮ್ಮ ದೀರ್ಘಕಾಲದ ಬೇಡಿಕೆ ಎಂದಿದ್ದಾರೆ.

"ನಮ್ಮ ಸಂಪುಟದ ಮೊದಲ ನಡಾವಳಿ ರಾಜ್ಯದ ಸ್ಥಾನಮಾನವನ್ನು ಮರಳಿ ನೀಡುವಂತೆ ಒತ್ತಾಯಿಸುವ ನಿರ್ಣಯವನ್ನು ಅಂಗೀಕರಿಸುವುದು. ಯಾರೇ ಮುಖ್ಯಮಂತ್ರಿಯಾದರೂ, ಆ ನಿರ್ಣಯದೊಂದಿಗೆ ದೆಹಲಿಗೆ ತೆರಳಿ, ತಮ್ಮ ಭರವಸೆಯನ್ನು ಈಡೇರಿಸುವಂತೆ ದೇಶದ ಹಿರಿಯ ನಾಯಕತ್ವವನ್ನು ಒತ್ತಾಯಿಸುವರು. ಜಮ್ಮು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ ಎನ್ನುವುದು ಇಡೀ ರಾಜ್ಯಕ್ಕೆ ನೀಡಿದ ಭರವಸೆ. ಯಾವುದೇ ಪಕ್ಷ ಅಥವಾ ಸರ್ಕಾರಕ್ಕೆ ನೀಡಿದ ಭರವಸೆಯಲ್ಲ" ಎಂದು ಉಮರ್ ಅಬ್ದುಲ್ಲಾ ಹೇಳಿದ್ದಾರೆ.



ಗದಗ ನಗರದ ಗಂಗಾಪೂರ ಪೇಟೆಯ ಶ್ರೀ ಬನಶಂಕರಿ ದೇವಸ್ಥಾನದಲ್ಲಿ ನವರಾತ್ರಿಯ 7ನೇ ದಿನವಾದ ಗುರುವಾರ ದೇವಾಂಗ ಸಮಾಜದ ಮಹಿಳೆಯರು ನೀಲಿ ಬಣ್ಣದ ಸೀರೆಯನ್ನುಟ್ಟು ಲಲಿತಾ ಸಹಸ್ರಾನಾಮ ಪಠಿಸಿ, ಪುರಾಣ ಪ್ರವಚನದಲ್ಲಿ ಪಾಲ್ಗೊಂಡು ಶ್ರೀದೇವಿಯ ಕೃಪೆಗೆ ಪಾತ್ರರಾದರು.

## ಪರಿಶ್ರಮ, ಸಾಧನೆಯಿಲ್ಲದೇ ಶ್ರೇಯಸ್ಸು ಸಿದ್ಧಿಸದು

▶▶ ಮೊದಲನೇ ಪುಟದಿಂದ

ಮುಖ್ಯ ಅತಿಥಿಗಳಾಗಿ ಶಾಸಕ ಮಾನಪ್ಪ ಡಿ.ವಜ್ಜಲ (ಲಿಂಗಸುಗೂರ), ವಿ.ಪ. ಸದಸ್ಯ ಎಸ್.ವಿ. ಸಂಕನೂರ, ಮಾಜಿ ಸಚಿವ ಎಸ್.ಎಸ್. ಪಾಟೀಲ, ವೀರಣ್ಣ ಮತ್ತೀಕಟ್ಟಿ ಭಾಗವಹಿಸಿದ್ದರು. ಶಾಸಕ ಜಿ.ಎಸ್. ಪಾಟೀಲರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಲಕ್ಷ್ಮೇಶ್ವರ ಕರೇವಾಡಿಮಠದ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು, ಹಿರೇವಡ್ಡಟ್ಟಿ ವೀರೇಶ್ವರ ಶಿವಾಚಾರ್ಯರು, ತಮ್ಮಡಿಹಳ್ಳಿ ಸಿದ್ಧಲಿಂಗ ಶಿವಾಚಾರ್ಯರು, ಮುಗುಳಖೋಡ ಶಾಖಾಮಠ ಅಬ್ಬಿಗೇರಿ ಡಾ. ಬಸವರಾಜ ಶರಣರು, ದೊಟಿಹಾಳ ಚಂದ್ರಶೇಖರ ದೇವರು ಹಿರೇಮಠ, ಲಿಂಗಸುಗೂರು ಶ್ರೀ ಮಾಣಿಕ್ಯೇಶ್ವರಿ ಆಶ್ರಮದ ಮಾತಾ ನಂದಿಕೇಶ್ವರಿ ಅಮ್ಮನವರು, ನರೇಗಲ್ಲ ಬ್ರಹ್ಮಕುಮಾರಿ ವಿ.ವಿ. ಕುಮಾರಿ ಸವಿತಾ ಅಕ್ಕನವರು, ಡಾ. ಕೆ.ಬಿ. ದನ್ನೂರು, ವೀರೇಶಗೌಡರು ಕೊಳಗಲ್ಲ, ಚನ್ನಪ್ಪ ಗೋನಾಳ, ಶಿವಯೋಗಿ ಕಳ್ಳಿಗುಡ್ಡ, ವಿರೂಪಾಕ್ಷಪ್ಪ ಪಟ್ಟಣಶೆಟ್ಟರ, ಅಬ್ದುಲ್ ರೆಹಮಾನ ಮುಲ್ಲಾ, ಪಂಚಯ್ಯ ಹಿರೇಮಠ, ಎಸ್.ಎನ್. ಕಾತರಕಿ, ಗೊಡಚಿ ಕ್ಷೇತ್ರದ ಪಾರ್ವತಮ್ಮ ಪಾಟೀಲ, ಮಹಾಂತಗೌಡ ಪಾಟೀಲ, ಈರನಗೌಡ ಪಾಟೀಲ, ಈರನಗೌಡ ಪಾಟೀಲ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಗದಗ ನಗರದ ವೀರೇಶ ಕೂಗುಮಠ ಸ್ವಾಗತಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಗದಗಿನ ಗಾನಭೂಷಣ ವೀರೇಶ ಕಿತ್ತೂರ ಮತ್ತು ರಾಘವೇಂದ್ರ ಕಮ್ಮಾರ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ಹಾಗೂ ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

ನಜರ್ ಸಮರ್ಪಣೆ: ಶಿವಾಚಾರ್ಯರು, ಶ್ರೀ ಪೀಠದ ಸಿಬ್ಬಂದಿ, ಪೀಠಾಭಿಮಾನಿಗಳು, ನರೇಗಲ್ಲ ಪತ್ರಿಕಾ ವರದಿಗಾರರು, ಆನೆ ಗಜಲಕ್ಷ್ಮಿ, ಹಗಲು ದೀವಟಿಗೆಯ ಮೇಘರಾಜ ಚಕ್ರಸಾಲಿ ಶ್ರೀ ರಂಭಾಪುರಿ ಜಗದ್ಗುರುಗಳಿಗೆ ನಜರ್ (ಗೌರವ) ಸಮರ್ಪಣೆ ಮಾಡಿದರು. ನಜರ್ ನಿರೂಪಣೆಯನ್ನು ಮಳಲಿ ಸಂಸ್ಥಾನಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನಿರ್ವಹಿಸಿದರು.

ಅನ್ನ ದಾಸೋಹ: ಅಬ್ಬಿಗೇರಿ ಮಂಜುನಾಥ ಅಂಗಡಿ(ಪ್ರಸಾರದ) ಇವರಿಂದ ಅನ್ನ ದಾಸೋಹದ ಸೇವೆ ಜರುಗಿತು.

### ಶಸ್ತ್ರಪೂಜನ, ಧರ್ಮಜಾಗೃತಿ ಸಭೆಯಲ್ಲಿ ಶ್ರೀದೇವಿ ದೇಶಪಾಂಡೆ

# ಸ್ತ್ರೀ ಸ್ವಾತಂತ್ರ್ಯ ಸ್ವೇಚ್ಛಾಚಾರವಾಗದಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ತ್ರೀಯು ಅಬಲೆಯಲ್ಲ ಸಬಲೆಯಾಗಿದ್ದು, ಅವಳಗಿರುವ ಸ್ವಾತಂತ್ರ್ಯವು ಸ್ವೇಚ್ಛಾಚಾರವಾಗದಂತೆ ಜಾಗೃತೆ ವಹಿಸುವುದು ಮಹಿಳೆಯ ಕರ್ತವ್ಯವಾಗಿದೆಯೆಂದು ಶಿರಸಿ ಜಿಲ್ಲಾ ರಾಷ್ಟ್ರ ಸೇವಿಕಾ ಸಮಿತಿ ಕಾರ್ಯವಾಹಿಕಾ ಶ್ರೀದೇವಿ ದೇಶಪಾಂಡೆ ಅಭಿಪ್ರಾಯಪಟ್ಟರು.

ಗದಗ ನಗರದ ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ವಿಶ್ವ ಹಿಂದೂ ಪರಿಷತ್ತಿನ ಮಾತೃಶಕ್ತಿ ಮತ್ತು ದುರ್ಗಾವಾಹಿನಿ ನೇತೃತ್ವದಲ್ಲಿ ನಡೆದ ಶಸ್ತ್ರಪೂಜನ ಹಾಗೂ ಧರ್ಮಜಾಗೃತಿ ಸಭೆಯಲ್ಲಿ ಮುಖ್ಯ ವಕ್ತಾರರಾಗಿ ಪಾಲ್ಗೊಂಡು ಮಾತನಾಡಿದರು.

ವೇದಕಾಲದಿಂದಲೂ ಮಹಿಳೆಗೆ ಪೂಜ್ಯಸ್ಥಾನವಿದ್ದು, ಮಾತೃ ದೇವೋಭವ ಎಂದು ಉಲ್ಲೇಖಿಸಲಾಗಿದೆ. ಎಲ್ಲಿ ಮಹಿಳೆಗೆ ಗೌರವ ಇರುವದೋ ಅಲ್ಲಿ ದೇವತೆಗಳು ವಾಸವಾಗಿರುತ್ತಾರೆ ಎಂದು ಹೇಳಲಾಗಿದೆ. ಇದನ್ನು ಹಿಂದೂ ಧರ್ಮದಲ್ಲಿ ಮಾತ್ರ ನಾವು ಕಾಣುತ್ತೇವೆ ಎಂದು ಹೇಳಿದರು.

ಮೆಕಾಲೆ ಶಿಕ್ಷಣಕ್ಕೆ ಮಾರು ಹೋಗಿರುವ ನಾವು ಸನಾತನ ಧರ್ಮ ಶಿಕ್ಷಣದ ಕೊರತೆಯಿಂದ ಸ್ವೇಚ್ಛಾಚಾರಿಗಳಾಗಿದ್ದು, ಇದು ದೇಶಕ್ಕೆ ಮತ್ತು ಧರ್ಮಕ್ಕೆ ಅಪಾಯಕಾರಿ ಎಂದು ಎಚ್ಚರಿಸಿದರು.

ಧರ್ಮಕಾರ್ಯದ ಜೊತೆಗೆ ದೇಶ ರಕ್ಷಣೆಗೆ ಹೋರಾಡಿದ ಮಹಿಳೆಯರು ನಮಗೆ ಪ್ರಾತಃಸ್ಮರಣೀಯರು. ಶಿವಾಜಿ ಮಹಾರಾಜರಲ್ಲಿ ಕ್ಷಾತ್ರ ತೇಜಸ್ಸು ತುಂಬಿ ಹಿಂದವೀ ಸಾಮ್ರಾಜ್ಯ ಸ್ಥಾಪಿಸಲು ಕಾರಣರಾದ ಜೀಜಾಮಾತಾ, ಮೊಘಲರಿಂದ ಧ್ವಂಸಗೊಂಡಿದ್ದ ದೇವಸ್ಥಾನಗಳನ್ನು ಪುನಃ ಸ್ಥಾಪಿಸಿದ ಅಹಲ್ಯಾಬಾಯಿ ಹೋಳ್ಕರ್, ರಾಣಿ ದುರ್ಗಾವತಿ, ಝಾನ್ಸಿರಾಣಿ ಲಕ್ಷ್ಮೀಬಾಯಿ, ರಾಣಿ ಚನ್ನಮ್ಮಾ, ಒನಕೆ ಓಬವ್ವ, ರಾಣಿ ಅಬ್ಬಕ್ಕ, ಹೀಗೆ ಸಾವಿರಾರು ಸಂಖ್ಯೆಯ ಸಾಹಸಿಯರು ನಮಗೆ ಆದರ್ಶವಾಗಬೇಕು.



ಇದೇ ಸಂದರ್ಭದಲ್ಲಿ ಪಿಎಸ್‌ಐ ರೇಣುಕಾ ಮುಂಡೇವಾಡೆ ಮಹಿಳೆಯರ ಜಾಗೃತೆಗಾಗಿ ಸಲಹೆ-ಸೂಚನೆ ನೀಡಿದರು. ಪ್ರಾರಂಭದಲ್ಲಿ ಶಿವಾನಂದ ಪಾಟೀಲರ ನೇತೃತ್ವದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ಧರ್ಮಸಭೆಯ ಅಧ್ಯಕ್ಷತೆಯನ್ನು ವಾಸವಿ ಮಹಿಳಾ ಮಂಡಳಿ ಉಪಾಧ್ಯಕ್ಷರಾದ ಆಶಾಲತಾ ಸಂಪಗಾವಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವಿ.ಹಿಂ.ಪ. ಜಿಲ್ಲಾ ಉಪಾಧ್ಯಕ್ಷರಾದ ರಾಣಿ ಚಂದಾವರಿ, ಮಾಧವಿ ಕಾಲವಾಡ, ರೇಣುಕಾ ಕಲಬುರ್ಗಿ, ಧರ್ಮದಾಸ ಮಾತನಾಡಿದರು.

> ಮಹಿಳೆಯಾದವಳು ತನ್ನ ವೈಯಕ್ತಿಕ ನೋವನ್ನು ನುಂಗಿ ಕುಟುಂಬ, ಸಮಾಜ, ರಾಷ್ಟ್ರಧರ್ಮ ಸಂರಕ್ಷಣೆಗೆ ಸೇವೆ, ಸುರಕ್ಷೆ, ನ್ಯಾಯಪಾಲನೆ, ಸೈನ್ಯ, ವಿಜ್ಞಾನ, ವ್ಯವಹಾರ, ಶಿಕ್ಷಣ, ರಾಜಕೀಯ, ಆಧ್ಯಾತ್ಮ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಪ್ರವೇಶಿಸಿ ದೇಶ-ಧರ್ಮ ಕಾರ್ಯಗಳಲ್ಲಿ ಕೈ ಜೋಡಿಸುತ್ತಿರುವರು ನಾವು ಕಾಣುತ್ತಿದ್ದು, ಇದರಿಂದ ಮಹಿಳೆ ಅಬಲೆಯಲ್ಲ ಸಬಲೆ ಎಂಬುದು ಸ್ಪಷ್ಟವಾಗುತ್ತದೆ ಎಂದು ಶ್ರೀದೇವಿ ದೇಶಪಾಂಡೆ ತಿಳಿಸಿದರು.

ವಿಶ್ವ ಹಿಂದೂ ಪರಿಷತ್ ವಿಭಾಗ ಕಾರ್ಯದರ್ಶಿ ರಮೇಶ ಕದಂ, ಜಿಲ್ಲಾಧ್ಯಕ್ಷ ಶ್ರೀಧರ ಕುಲಕರ್ಣಿ, ಕೋಶಾಧ್ಯಕ್ಷ ಮಾರುತಿ ಪವಾರ, ವಾಸವಿ ಮಹಿಳಾ ಮಂಡಳದ ಸರ್ವ ಸದಸ್ಯರು, ನಗರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ಸದಸ್ಯರು ಭಾಗವಹಿಸಿದ್ದರು.

ನಿಖಿತಾ ಸುತಾರ ಪ್ರಾರ್ಥನೆಗೈದರು. ಪ್ರಥಾ ಪವಾರ ಸ್ವಾಗತಿಸಿ, ಪರಿಚಯಿಸಿದರು. ಸಂಜಾನಾ ಬನಹಟ್ಟಿ ಕಾರ್ಯಕ್ರಮ ನಿರೂಪಿಸಿದರು. ಅರುಣಾ ಗುಂಡಗಟ್ಟಿ ವಂದಿಸಿದರು. ಲಾವಣ್ಯ ಭಾಂಡಗೆ ಹಾಗೂ ಮೇಘಾ ಭಾಂಡಗೆ ಶಾಂತಿಮಂತ್ರ ಹಾಗೂ ಜಯಘೋಷ ನೆರವೇರಿಸಿದರು.

# ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರು ಅಕ್ಟೋಬರ್ 11 ರಿಂದ 13ರ ವರೆಗಿನ ಜಿಲ್ಲಾ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ.

ಅಕ್ಟೋಬರ್ 11 ರಂದು ಬೆ 7.30 ಗಂಟೆಗೆ ಹುಬ್ಬಳ್ಳಿಯಿಂದ ಗದುಗಿಗೆ ರಸ್ತೆ ಮೂಲಕ ಆಗಮಿಸುವರು. ಬೆ 11 ಗಂಟೆಗೆ ನಾಗಾವಿ ಗ್ರಾಮದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 12 ಗಂಟೆಗೆ ಸಂಭಾಪುರ ಗ್ರಾಮದಲ್ಲಿ ಶ್ರೀ ದುರ್ಗಾದೇವಿ ಸಮುದಾಯ ಭವನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 1 ಗಂಟೆಗೆ ಮುಳಗುಂದ ಗ್ರಾಮದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1.30 ಗಂಟೆಗೆ ಕುರ್ತಕೋಟಿ ಗ್ರಾಮದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮ ಹಾಗೂ ಮಧ್ಯಾಹ್ನ 2 ಗಂಟೆಗೆ ಅಂತೂರು ಬೆಂತೂರು ಗ್ರಾಮದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.


ನಂತರ ಆಯುಧ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 12 ರಂದು ಸಂಜೆ 5.30 ಗಂಟೆಗೆ ನಗರದ ಬನ್ನಿಕಟ್ಟಿ ಭೀಷ್ಮ ಕೆರೆ ಹತ್ತಿರ ಸೀಮೋಲ್ಲಂಘನೆ ಮತ್ತು ಬನ್ನಿ ಮುಡಿಯುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಅಕ್ಟೋಬರ್ 13 ರಂದು ಬೆ 9 ಗಂಟೆಗೆ ಗದಗದಿಂದ ರಸ್ತೆ ಮೂಲಕ ಸವದತ್ತಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### .ಗೊ.ರು. ಚನ್ನಬಸಪ್ಪರಿಗೆ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ಪ್ರಶಸ್ತಿ

# ತೋಂಟದ ಶ್ರೀಗಳ ರಾಷ್ಟ್ರೀಯ ಪ್ರಶಸ್ತಿ ಪ್ರದಾನ

■ ವಿಜಯಸಾಕ್ಷಿ ಸುದ್ದಿ, ಗದಗ



ಬಸವಣ್ಣನ ಕರುಣೆ, ದಯೆ, ಕಾಯಕ-ದಾಸೋಹ, ಸಮಾನತೆ, ಅಲ್ಲಮಪ್ರಭುಗಳ ವೈರಾಗ್ಯ, ಬಸವಣ್ಣನವರ ಜ್ಞಾನ, ಅಕ್ಕಮಹಾದೇವಿಯ ಹಂಬಲ, ಅಸಂಖ್ಯ ಶರಣರ ತಾಯ್ತನ, ಕ್ರಿಯಾಶೀಲತೆ ಮುಂತಾದ ಪುಣ್ಯವಿಶೇಷಗಳಿಂದ ಜೀವಂತ ರೂಪವಾಗಿ ಮೈದಾಳಿದವರು ಲಿಂಗೈಕ್ಯ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರು. ಯಾವುದೇ ಒಂದು ಕಪ್ಪುಚುಕ್ಕೆ ಇಲ್ಲದೆ ಪರಿಶುದ್ಧವಾದ ತಮ್ಮ ಜೀವನವನ್ನು ಈ ನಾಡು-ನುಡಿ, ಗಡಿ-ನಿಸರ್ಗ, ಕಲೆ, ಸಾಹಿತ್ಯ, ಬಸವತತ್ವ ಪ್ರಸಾರ, ದೀನದಲಿತರ ಉನ್ನತಿಗಾಗಿ ಮೀಸಲಿಟ್ಟರು. ಅವರ ಭಾವೈಕ್ಯತೆಗಾಗಿ ಕರ್ನಾಟಕ ಸರ್ಕಾರ ರಾಜ್ಯೋತ್ಸವ ಪ್ರಶಸ್ತಿ ಹಾಗೂ ರಾಷ್ಟ್ರೀಯ ಬಸವ ಪುರಸ್ಕಾರ ಪ್ರಶಸ್ತಿ, ಕೇಂದ್ರ ಸರ್ಕಾರ ಕೋಮುಸೌಹಾರ್ದತಾ ಹಾಗೂ ದೇಶದ ಏಕತಾ ಪ್ರಶಸ್ತಿ, ಕಲಬುರ್ಗಿ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪ್ರಶಸ್ತಿಯನ್ನು ನೀಡಿ ಪ್ರಶಸ್ತಿಗಳ ಗೌರವವನ್ನು ಹೆಚ್ಚಿಸಲಾಗಿದೆ.

ಪೂಜ್ಯರ ನುಡಿ ಸಿಂಹವಾಣಿಯಾಗಿತ್ತು. ತಮ್ಮ ವೀರ-ಧೀರ ನಡೆ-ನುಡಿಗಳಿಂದ ಮಹಾಶರಣರಂತೆ ಬದುಕಿ ನಾಳೆ ಬಪ್ಪುದು ನಮಗೀಗಲೇ ಬರಲಿ, ಮರಣವೇ ಮಹಾನವಮಿ ಎಂಬ ಶರಣವಾಣಿಗೆ ನಿದರ್ಶನವಲ್ಲ, ಸ್ವತಃ ದರ್ಶನವೇ ತಾವಾಗಿ ವಿಜಯದಶಮಿ ದಿನ ಎಲ್ಲರಿಗೂ ಬನ್ನಿ ಎಂದು, ಬನ್ನಿ ಬಂಗಾರ ನೀಡಿ ಮರುದಿನದ ಬೆಳಗಿನಲ್ಲಿ ಬೆಳಗಾದ ಮಹಾತ್ಮರು ಅವರ ಸಾಧನೆಗಳನ್ನು ನೆನೆದು ಅವರ ಅಭಿಮಾನಿ-ಶಿಷ್ಯರು, ಅವರ ಹೆಸರಿನಲ್ಲಿ ರಾಷ್ಟ್ರೀಯ ಪ್ರಶಸ್ತಿಯನ್ನು ಸ್ಥಾಪಿಸಿದ್ದಾರೆ. ಆ ಪ್ರಶಸ್ತಿಯನ್ನು, ಅದರೊಂದಿಗೆ 5 ಲಕ್ಷ ರೂಪಾಯಿ ಮೊತ್ತವನ್ನು ಹಾಗೂ ಫಲಕದೊಂದಿಗೆ ಪ್ರತಿ ವರ್ಷ ಪ್ರದಾನ ಮಾಡಲಾಗುವುದು ಮತ್ತು ಮರೆಗುದ್ದಿಯ ಪೂಜ್ಯ ಡಾ.ನಿರುಪಾಧೀಶ್ವರ ಮಹಾಸ್ವಾಮಿಗಳ ಸಂಮಾನ ನಡೆಯುವುದು.

ಅದರಂತೆ 2024ನೇ ಸಾಲಿನ ಪ್ರಶಸ್ತಿಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಕರ್ನಾಟಕ ಜಾನಪದ ಪರಿಷತ್ತು, ಕರ್ನಾಟಕ ಜಾನಪದ ಆಕಾಡೆಮಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಅಪಾರ ಸೇವೆ ಸಲ್ಲಿಸಿದ ಗೊ.ರು ಚೆನ್ನಬಸಪ್ಪ ಅವರಿಗೆ ಪೂಜ್ಯರ 6ನೇ ಪುಣ್ಯಸ್ಮರಣೋತ್ಸವ ಅಂಗವಾಗಿ ಅ.14ರಂದು ಬೆಳಿಗ್ಗೆ 11 ಗಂಟೆಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಕಾರ್ಯಕ್ರಮದ ಸಾನ್ನಿಧ್ಯವನ್ನು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಕರ್ನಾಟಕ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿಯವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಮುಂಡರಗಿ-ಬೈಲೂರ, ಭೈರನಟ್ಟಿ, ಆಳಂದ, ಸಂಡೂರ, ಅರಸಿಕೇರಿ ಮಠದ ಮಹಾಸ್ವಾಮಿಗಳು ಸಮ್ಮುಖ ವಹಿಸುವರು. ಪ್ರೊ.ಶಿವಾನಂದ ಪಟ್ಟಣಶೆಟ್ಟಿ ಅವರು ರಚಿಸಿದ 'ಶ್ರೀ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ದುಬೈ ಭೇಟಿಯ ನೆನಪುಗಳು' ಹಾಗೂ ಡಾ. ಲಕ್ಷ್ಮಣ ಕೌಂಠೆ ರಚಿಸಿದ 'ಶ್ರೀ ಚನ್ನಬಸವ ಸ್ವಾಮಿಗಳು' ಗ್ರಂಥಗಳು ಲೋಕಾರ್ಪಣೆಗೊಳ್ಳುವವು. ಈ ಕಾರ್ಯಕ್ರಮಕ್ಕೆ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಎಲ್ಲ ಸದ್ಭಕ್ತರು, ಅಭಿಮಾನಿಗಳು ಪಾಲ್ಗೊಳ್ಳಲು ಪ್ರಶಸ್ತಿ ಸಮಿತಿ ಕಾರ್ಯದರ್ಶಿ ಪ್ರೊ.ಶಿವಾನಂದ ಪಟ್ಟಣಶೆಟ್ಟಿಯವರು ವಿನಂತಿಸಿದ್ದಾರೆ.

> ಕಾರ್ಯಕ್ರಮದ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಸಿ.ಸಿ ಪಾಟೀಲ, ಜಿ.ಎಸ್ ಪಾಟೀಲ, ಡಾ. ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಮಾಜಿ ಸಂಸದರಾದ ಶಿವಕುಮಾರ ಉದಾಸಿ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಕಳಕಪ್ಪ ಬಂಡಿ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ವಿಶೇಷ ಅತಿಥಿಗಳಾಗಿ ದಾವಣಗೆರೆ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಬಿ.ಡಿ. ಕುಂಬಾರ ಅವರು ಭಾಗವಹಿಸುವರು.

### ಹಿಂದೂ ಸಂಪ್ರದಾಯದಂತೆ 14 ಗರ್ಭಿಣಿಯರಿಗೆ ಸಾಮೂಹಿಕ ಸೀಮಂತ

# ಭಾವೈಕ್ಯತೆಯ ನವರಾತ್ರಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ದಂಡಿನ ದುರ್ಗಾದೇವಿ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಹಮ್ಮಿಕೊಂಡಿದ್ದ ಸಾಮೂಹಿಕ ಸೀಮಂತ ಕಾರ್ಯಕ್ರಮದಲ್ಲಿ ಮುಸ್ಲಿಂ ಗರ್ಭಿಣಿಗೆ ಹಿಂದೂ ಸಂಪ್ರದಾಯದಂತೆ ಸೀಮಂತ ನೆರವೇರಿಸಿದ್ದು ಭಾವೈಕ್ಯತೆಯ ಸಂದೇಶ ಸಾರಿತು.



24ನೇ ವರ್ಷದ ದೇವಿ ಪುರಾಣ ಕಾರ್ಯಕ್ರಮದಂಗವಾಗಿ ದಂಡಿನ ದುಗಾದೇವಿ ಸೇವಾ ಸಮಿತಿಯು ಗ್ರಾಮದ 11 ವಾರ್ಡ್‌ಗಳ 14 ಗರ್ಭಿಣಿಯರಿಗೆ ಹಿಂದೂ ಸಂಪ್ರದಾಯದಂತೆ ಸೀಮಂತ ಕಾರ್ಯಕ್ರಮ ನೆರವೇರಿಸಿದರು.

ವಿವಿಧ ಓಣಿಯ 14 ಜನ ಗರ್ಭಿಣಿಯರು ದುರ್ಗಾದೇವಿ ದೇವಸ್ಥಾನದಲ್ಲಿ ಅಂಗನವಾಡಿ ಕಾರ್ಯಕರ್ತರು ಕೊಡುಗೆಯಾಗಿ ನೀಡಿದ ಒಂದೇ ಬಣ್ಣದ ಸೀರೆಯನ್ನುಟ್ಟು ಒಂದೇ ಕಡೆ ಆಸೀನರಾಗಿದ್ದು ವಿಶೇಷವಾಗಿತ್ತು. ಕಾರ್ಯಕ್ರಮಕ್ಕೆ ಆಗಮಿಸಿದ್ದ ಮುತ್ತೈದೆಯರೆಲ್ಲರೂ ಅರಿಶಿಣ, ಕುಂಕಮ ಹಚ್ಚಿ, ಹಸಿರು ಬಳೆ, ಹೂವಿನ ದಂಡೆ ಹಾಕಿ ಉಡಿ ತುಂಬಿ ಆರತಿ ಬೆಳಗಿದರು. ಸೀಮಂತ ಕಾರ್ಯದಲ್ಲಿ ಭಾಗಿಯಾದ ಗರ್ಭಿಣಿಯರು, ನಮ್ಮ ಮನೆಯಲ್ಲಾದರೂ ಇಷ್ಟೊಂದು ಸಡಗರ, ಸಂಭ್ರಮ, ಸಂಪ್ರದಾಯ ಇರುತ್ತಿರಲಿಲ್ಲ. ಗ್ರಾಮದ ನೂರಾರು ಮುತ್ತೈದೆಯರು ಆರತಿ ಬೆಳಗಿ ಆಶೀರ್ವಾದ ಮಾಡಿದ್ದು ಅತೀವ ಸಂತೋಷವಾಯಿತು ಎಂದು ಸಂತಸಪಟ್ಟರು.

ಸೇರಿದ ಮಹಿಳೆಯರು ಸಂಪ್ರದಾಯದಂತೆ ಸೋಬಾನ ಪದ ಹಾಡುವದರೊಂದಿಗೆ ಕಾರ್ಯಕ್ರಮಕ್ಕೆ ಕಳೆ ತಂದರು. ಸಂಗೀತಗಾರರಾದ ಅಂದಪ್ಪ ಮೆಣಸಿನಕಾಯಿ, ಮಂಜುನಾಥ ಗರ್ಜಪ್ಪನವರ ಸೀಮಂತ ಕಾರ್ಯಕ್ರಮಕ್ಕೆ ಸಂಬಂಧಿಸಿದ ಜಾನಪದ ಹಾಡುಗಳು ಗಮನ ಸೆಳೆದವು. ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ ಅವರು ದೇವಿ ಪುರಾಣದ 10ನೇ ಅಧ್ಯಾಯದ ಪ್ರವಚನವನ್ನು ಅರ್ಥಗರ್ಭಿತವಾಗಿ ವಿವರಿಸಿದರು.

ದುರ್ಗಾದೇವಿ ಸೇವಾ ಸಮಿತಿಯ ಕಾರ್ಯದರ್ಶಿಯಾಗಿ ಕಳೆದ 24 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ನಜೀರಅಹ್ಮದ ಕಿರಿಟಗೇರಿ ಅವರ ಸೇವೆಯು ಕೋಮು ಸೌಹಾರ್ದತೆಗೆ ಸಾಕ್ಷಿಯಾಗಿದೆ. ರುದ್ರಪ್ಪ ಮುಸ್ಕಿನಭಾವಿ ಅಧ್ಯಕ್ಷರಾಗಿದ್ದು, 11 ಜನ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಮುಂದಿನ ವರ್ಷ ದೇವಿ ಪುರಾಣವು 25 ವರ್ಷ ಪೂರೈಸುತ್ತಿದ್ದು ಬೆಳ್ಳಿ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿದೆ ಎಂದು ಸಮಿತಿಯ ಪದಾಧಿಕಾರಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

> ನಮ್ಮ ಕುಟುಂಬ ಮತ್ತು ಸಮುದಾಯದಲ್ಲಿ ಗರ್ಭಿಣಿಯರಿಗೆ ಸೀಮಂತ ಮಾಡುವ ಸಂಪ್ರದಾಯವಿಲ್ಲ. ಆದರೆ ದುರ್ಗಾದೇವಿಯ ಸನ್ನಿಧಿಯಲ್ಲಿ ಹಿಂದೂ ಸಂಪ್ರದಾಯದಂತೆ ಸೀಮಂತ ಕಾರ್ಯ ನೆರವೇರಿಸಿದ್ದು ಸಂತಸ ತಂದಿದೆ.
>
> **- ರುಬಿನಾ ಖಾಜಾಹುಸೇನ. ಲಕ್ಕುಂಡಿ.**

### ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಗೆ

# ಬ್ರಿಟನ್‌ನ ಸೇವಾ ಯು.ಕೆ ತಂಡ ಭೇಟಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಸೇವಾ ಭಾರತಿ ಟ್ರಸ್ಟ್‌ನ ಗದಗ ನಗರದ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಗೆ ಬ್ರಿಟನ್‌ನ ಸೇವಾ ಯು.ಕೆ ತಂಡ ಆಗಮಿಸಿ ಶಾಲೆಯ ಮತ್ತು ಮಕ್ಕಳ ಪ್ರಗತಿಯನ್ನು ಅವಲೋಕಿಸಿತು.

ಸೇವಾ ಯು.ಕೆಯಿಂದ ನೀಡಿದ ಅನುದಾನವನ್ನು ಸಮರ್ಥವಾಗಿ ಸದ್ವಿನಿಯೋಗ ಮಾಡಿರುವದನ್ನು, ಶಾಲೆ ಮತ್ತು ಮಕ್ಕಳ ಪ್ರಗತಿಯನ್ನು ಸ್ವತಃ ಅವಲೋಕಿಸಿತು.

ತಂಡದ ಸದಸ್ಯರು ವಿಶೇಷ ಅಗತ್ಯವುಳ್ಳ ಮಕ್ಕಳೊಂದಿಗೆ ಕೆಲ ಕಾಲ ಕಳೆದರು. ಮಕ್ಕಳು ಪ್ರಸ್ತುತಪಡಿಸಿದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಡಿಸಿದರಲ್ಲದೆ, ಮಕ್ಕಳೊಂದಿಗೆ ಮ್ಯೂಸಿಕಲ್ ಚೇರ್ ಆಟವಾಡಿ ಸಂಭ್ರಮಿಸಿದರು. ಆಡಳಿತ ಮಂಡಳಿ ಹಾಗೂ ಶಾಲಾ ಶಿಕ್ಷಕರೊಂದಿಗೆ ಚರ್ಚೆ ನಡೆಸಿದ ಅಗತ್ಯ ಮಾಹಿತಿ ಸಂಗ್ರಹಿಸಿದ ತಂಡವು ಅನುದಾನದ ಅಗತ್ಯವಿದ್ದರೆ ಯೋಜನೆ ಸಿದ್ಧಪಡಿಸಿ ಕಳುಹಿಸುವಂತೆ ಸೂಚಿಸಿತಲ್ಲದೆ ಶಾಲೆಯ ಅಭಿವೃದ್ಧಿ, ಮಕ್ಕಳ ಪ್ರಗತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿತು.



ಅರುಣೋದಯ ಆಡಳಿತ ಮಂಡಳಿತ ಮಂಡಳಿಯ ಅಧ್ಯಕ್ಷ ಟಿ.ಎಸ್. ಜಮಾದಾರ, ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಕಾರ್ಯದರ್ಶಿ ಜಯರಾಜ ಮುಳಗುಂದ, ಕೋಶಾಧ್ಯಕ್ಷ ಜಿತೇಂದ್ರ ಶಹಾ, ಸದಸ್ಯರಾದ ಬಸವರಾಜ ನಾಗಲಾಪೂರ, ಉಮಾಕಾಂತಸಾ ಮೇರವಾಡೆ, ಲಲಿತ ಜೈನ್, ಪ್ರಕಾಶ ವೈಲಾಯ್, ಡಾ. ಉಮೇಶ ಹಾದಿ, ಬಸವರಾಜ ಪಟ್ಟಣಶೆಟ್ಟಿ, ಜಯಪ್ರಕಾಶ ಭಜಂತ್ರಿ, ವಿಶೇಷ ಆಹ್ವಾನಿತ ಸದಸ್ಯರಾದ ಸುಧೀರಸಿಂಹ ಘೋರ್ಪಡೆ, ಶಾಲೆಯ ಮುಖ್ಯೋಪಾಧ್ಯಾಯ ಶಿಕ್ಷಕರು ಮತ್ತು ಸಿಬ್ಬಂದಿ ಸೇವಾ ಯು.ಕೆ ತಂಡವನ್ನು ಹೂಗುಚ್ಛ ನೀಡುವ ಮೂಲಕ ಬರಮಾಡಿಕೊಂಡರು.

ಸೇವಾ ಯು.ಕೆ ಮಾಜಿ ಚೇರಮನ್ ಭರತ್ ಒಡಕುಲ, ಹಾಲಿ ಕಾರ್ಯದರ್ಶಿ ನಿಲೇಶ್ ಸೋಳಂಕಿ, ಸೇವಾ ಯು.ಕೆ ಪ್ರತಿನಿಧಿ ಸುಬ್ರಹ್ಮಣ್ಯ, ಸೇವಾ ಭಾರತಿ ಟ್ರಸ್ಟ್‌ನ ಪ್ರಾಂತ ಸಂಯೋಜಕರಾದ ಶಂಕರ ಗುಮಾಸ್ತೆ ತಂಡದಲ್ಲಿದ್ದರು.

### ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ನಿಮಿತ್ತ ಕೃಷಿ ಮೇಳ

# ವಿನೂತನ ಯಂತ್ರೋಪಕರಣಗಳ ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರೀಮದ್ ರಂಭಾಪುರಿ ಜಗದ್ಗುರುಗಳ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ನಿಮಿತ್ತ ಸಮೀಪದ ಅಬ್ಬಿಗೇರಿಯಲ್ಲಿ ರೋಣ ಕೃಷಿ ಇಲಾಖೆಯ ಸಹಯೋಗದಲ್ಲಿ ನಡೆದ ಕೃಷಿ ಮೇಳವನ್ನು ಯಡೆಯೂರು ಶ್ರೀ ರೇಣುಕ ಶಿವಾಚಾರ್ಯ ಸ್ವಾಮೀಜಿ ಉದ್ಘಾಟಿಸಿದರು.



ಈವೇಳೆ ಸಿದ್ದರಬೆಟ್ಟ, ಅಬ್ಬಿಗೇರಿ ಹಿರೇಮಠದ ಶ್ರೀ ವಿರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಕೃಷಿ ಪ್ರಧಾನವಾಗಿರುವ ಈ ಭಾಗದ ರೈತರಿಗೆ ಕೃಷಿಯ ಬಗ್ಗೆ ಮಾಹಿತಿ ಹಾಗೂ ವಿನೂತನ ಯಂತ್ರೋಪಕರಣಗಳ ಬಗ್ಗೆ ಮಾಹಿತಿಗಾಗಿ ದಸರಾ ಧರ್ಮ ಸಮ್ಮೇಳನದಲ್ಲಿ ಕೃಷಿ ಮೇಳ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಇಳುವರಿ ಪಡೆಯಬೇಕೆಂಬ ಉದ್ದೇಶ ಹಾಗೂ ಗೊಬ್ಬರ, ಕೀಟನಾಶಕ ಹಾಗೂ ಇನ್ನಿತರ ವಿಷಕಾರಿ ರಾಸಾಯನಿಕಗಳನ್ನು ಕೃಷಿ ಬೆಳೆಗಳಿಗೆ ಬಳಕೆ ಮಾಡುತ್ತಿರುವುದರಿಂದ ಸತ್ವಹೀನ ಕೃಷಿ ಉತ್ಪನ್ನಗಳು ಮನುಷ್ಯನ ಆರೋಗ್ಯದ ಮೇಲೆ ಕೆಟ್ಟ ಪರಿಣಾಮಗಳನ್ನು ಬೀರುತ್ತಿವೆ. ಸಿರಿಧಾನ್ಯ ಬೆಳೆಯುವುದರ ಮುಖಾಂತರ ಆರೋಗ್ಯವಂತ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ. ಎಲ್ಲ ರೈತರು ಕೃಷಿ ಮೇಳದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಅಬ್ಬಿಗೇರಿ ಕೃಷಿಮೇಳದಲ್ಲಿ 15ಕ್ಕೂ ಹೆಚ್ಚಿನ ಮಳಿಗೆಗಳಲ್ಲಿ ಕೃಷಿ ವಸ್ತುಗಳ ಪ್ರದರ್ಶನ, ಟ್ರ್ಯಾಕ್ಟರ್, ರೊಟವೇಟರ್, ಬಿತ್ತುವ ಕೂರಿಗೆ, ನೇಗಿಲು, ಸ್ಪ್ರಿಂಕ್ಲರ್ ಪೈಪ್, ಹೊಸ ತಳಿಯ ಬಿತ್ತನೆ ಬೀಜಗಳ ಪ್ರದರ್ಶನ ಸೇರಿದಂತೆ ಹಲವಾರು ಕೃಷಿ ಉಪಕರಣಗಳನ್ನು ವೀಕ್ಷಿಸಲು ರೈತರು ಆಗಮಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ರೋಣ ಕೃಷಿ ಇಲಾಖೆ ಉಪನಿರ್ದೇಶಕ ಪಾಲಕ್ಷಗೌಡ, ಕೃಷಿ ಅಧಿಕಾರಿಗಳಾದ ಸಾವಿತ್ರಿ ಶಿವನಗೌಡ, ಬಸವರಾಜ, ಸಿ.ಕೆ. ಕಮ್ಮಾರ, ಶಿವಪುತ್ರಪ್ಪ ದೊಡ್ಡಮನಿ, ಮಂಜುನಾಥ ಬೀಳಗಿ, ಶಿವಾನಂದ ಅರಹುಣಶಿ, ಬಸವರಾಜ ಪಲ್ಲೇದ, ಎಂ.ಎಸ್. ಧಡೇಸೂರಮಠ, ಸುರೇಶ ನಾಯ್ಕರ್, ಸಂಗಪ್ಪ ಕುಂಬಾರ, ಮಂಜುನಾಥ ಅಂಗಡಿ, ಸುರೇಶ ಬಸವರಡ್ಡೇರ, ಪ್ರಕಾಶ ಜಕರಡ್ಡಿ ಸೇರಿದಂತೆ ಸುತ್ತಮುತ್ತಲಿನ ರೈತರು ಭಾಗವಹಿಸಿದ್ದರು.

> ರೋಣ ಕೃಷಿ ಇಲಾಖೆ ಸಹಾಯಕ ಉಪ ನಿರ್ದೇಕ ರವೀಂದ್ರಗೌಡ ಪಾಟೀಲ ಮಾತನಾಡಿ, ಬೇಳೆ ಕಾಳು, ಎಣ್ಣೆಕಾಳು, ಕಿರುಧಾನ್ಯ, ತರಕಾರಿ, ಹಣ್ಣು ಮೊದಲಾದವುಗಳ ಮೌಲ್ಯವರ್ಧನೆಯ ನಿಟ್ಟಿನಲ್ಲಿ ರೈತರು ಗಮನ ಹರಿಸಬೇಕು. ನ್ಯಾನೋ ಯೂರಿಯಾ, ನ್ಯಾನೋ ಡಿಎಪಿ ಬಳಕೆ ಮಾಡಬೇಕು. ಯಾವುದೇ ಬೆಳೆ ಬಿತ್ತುವ ಮುನ್ನ ಬಿಜೋಪಚಾರ ಮಾಡಿ ಬಿತ್ತನೆ ಮಾಡಬೇಕು. ಅಂದರೆ ಬೆಳೆಗೆ ರೋಗ ಅಂಟುವಿಕೆ ಕಡಿಮೆ ಆಗುತ್ತದೆ. ಸಿರಿಧಾನ್ಯದಿಂದ ರೋಗ ಮುಕ್ತರಾಗಲು ಸಾಧ್ಯ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka